ಸಂಪುಟ : 9 ಸಂಚಿಕೆ 289 ಪುಟ : 4+2 ಬೆಲೆ: 3.00 ಶನಿವಾರ ಡಿಸೆಂಬರ್ 28 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 289 Pages : 4+2 Price : 3.00 Saturday December 28 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಡಾ. ಸಿಂಗ್ ನಿಧನಕ್ಕೆ ತೋಂಟದ ಶ್ರೀ ಸಂತಾಪ



**■ವಿಜಯಸಾಕ್ಷಿ ಸುದ್ದಿ, ಗದಗ**

ದೇಶದ ಮಾಜಿ ಪ್ರಧಾನಿ, ಆರ್ಥಿಕ ತಜ್ಞ, ಮುತ್ಸದ್ಧಿ ರಾಜಕಾರಣಿ ಡಾ. ಮನಮೋಹನ್ ಸಿಂಗ್ ಅವರ ಅಗಲುವಿಕೆಯಿಂದ ದೇಶವು ಒಬ್ಬ ಶ್ರೇಷ್ಠ, ಅನುಭವಿ ಆರ್ಥಿಕ ತಜ್ಞನನ್ನು ಕಳೆದುಕೊಂಡಂತಾಗಿದೆ. ಅರ್ಥಶಾಸ್ತ್ರದ ಪ್ರಾಧ್ಯಾಪಕರಾಗಿ, ಭಾರತೀಯ ರಿಸರ್ವ್ ಬ್ಯಾಂಕಿನ ಗವರ್ನರ್ ಆಗಿ, ಯೋಜನಾ ಆಯೋಗದ ಉಪಾಧ್ಯಕ್ಷರಾಗಿ, ಹಣಕಾಸು ಸಚಿವರಾಗಿ ಇದೆಲ್ಲಕ್ಕೂ ಮಿಗಿಲಾಗಿ ದೇಶದ ನೆಚ್ಚಿನ ಪ್ರಧಾನಿಯಾಗಿ ಅವರು ಸಲ್ಲಿಸಿದ ಸೇವೆ ಅಪೂರ್ವ ಹಾಗೂ ಅನುಪಮ. ದೇಶದ ಅರ್ಥ ವ್ಯವಸ್ಥೆಗೆ ಭದ್ರ ಬುನಾದಿ ಒದಗಿಸಿದ ಶ್ರೇಯಸ್ಸು ಡಾ. ಸಿಂಗ್ ಅವರಿಗೆ ಸಲ್ಲುತ್ತದೆ ಎಂದು ಡಂಬಳ-ಗದಗ ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

ಮೌನ ಬಂಗಾರ, ಮಾತು ಬೆಳ್ಳಿ ಎಂಬಂತೆ ಬದುಕಿದ ಡಾ. ಮನಮೋಹನ್ ಸಿಂಗ್ ಅವರು ಮಾತಿಗಿಂತಲೂ ಕೃತಿಗೆ ಮಹತ್ವ ನೀಡಿದವರು. ನಿಷ್ಕಳಂಕ ಚಾರಿತ್ರ್ಯದ ಅವರ ಆದರ್ಶದ ಬದುಕು ಎಲ್ಲರಿಗೂ ಮಾದರಿ. ಭಗವಂತ ಅವರ ಆತ್ಮಕ್ಕೆ ಚಿರಶಾಂತಿಯನ್ನು ದಯಪಾಲಿಸಲಿ ಎಂದು ಶ್ರೀಗಳು ಪ್ರಾರ್ಥಿಸಿದ್ದಾರೆ.

### ಗದಗ-ಹೊಂಬಳ ಸಂಪರ್ಕ ಕಲ್ಪಿಸುವ ರೈಲ್ವೆ ಮೇಲ್ಸೇತುವೆ ಕಾಮಗಾರಿ ಪರಿಶೀಲಿಸಿದ ಸಂಸದ ಬಸವರಾಜ ಬೊಮ್ಮಾಯಿ

# ಐದಾರು ತಿಂಗಳಲ್ಲಿ ಮೇಲ್ಸೇತುವೆ ಕಾಮಗಾರಿ ಪೂರ್ಣ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಂಗಾಪುರ ಪೇಟೆಯಲ್ಲಿರುವ ಗದಗ ಹಾಗೂ ಹೊಂಬಳ ಸಂಪರ್ಕ ಕಲ್ಪಿಸುವ, ನಿರ್ಮಾಣ ಹಂತದಲ್ಲಿರುವ ರೈಲ್ವೆ ಮೇಲ್ಸೇತುವೆ ಕಾಮಗಾರಿಯನ್ನು ಐದಾರು ತಿಂಗಳಲ್ಲಿ ಪೂರ್ಣಗೊಳಿಸುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಶುಕ್ರವಾರ ಗದಗ ನಗರದ ಗಂಗಾಪುರ ಪೇಟೆಯಲ್ಲಿರುವ ಗದಗ-ಹೊಂಬಳ ಸಂಪರ್ಕ ಕಲ್ಪಿಸುವ ನಿರ್ಮಾಣ ಹಂತದಲ್ಲಿರುವ ರೈಲ್ವೆ ಸೇತುವೆ ಕಾಮಗಾರಿಯ ಪರಿಶೀಲನೆ ನಡೆಸಿದ ನಂತರ ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು.

ಹೊಂಬಳ ಗ್ರಾಮೀಣ ಪ್ರದೇಶದಿಂದ ಅಂಬೇಡ್ಕರ್ ನಗರದ ಮೂಲಕ ಹಾದುಹೋಗುವ ರೈಲ್ವೆ ಮೇಲ್ಸೇತುವೆ ಕಾಮಗಾರಿ ಪರಿಶೀಲನೆ ನಡೆಸಲಾಗಿದೆ. ಬಹಳ ವರ್ಷಗಳಿಂದ ಕಾಮಗಾರಿ ಸ್ಥಗಿತಗೊಂಡಿತ್ತು. ಮೂರು ತಿಂಗಳ ಹಿಂದೆ ಈ ಕಾಮಗಾರಿಯ ಕುರಿತು ಹುಬ್ಬಳಿಯ ನೈರುತ್ಯ ರೇಲ್ವೆ ವಲಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದಾಗ



ಕೂಡಲೆ ಕಾಮಗಾರಿ ಪ್ರಾರಂಭ ಮಾಡುವುದಾಗಿ ತಿಳಿಸಿದ್ದರು. ಅದೇ ರೀತಿ ಕ್ರಮ ಕೈಗೊಂಡಿದ್ದಾರೆ. ಹೊಸ ಗುತ್ತಿಗೆದಾರರನ್ನು ನೇಮಿಸಿದ್ದು, ಕಾಮಗಾರಿ ಪ್ರಾರಂಭವಾಗಿದೆ ಎಂದರು.

ಇಲ್ಲಿ ಎರಡು-ಮೂರು ಕಾಮಗಾರಿಗಳ ಕುರಿತು ಚರ್ಚೆ ಮಾಡಿದ್ದೇವೆ. ಅಂಬೇಡ್ಕರ್ ನಗರದಲ್ಲಿನ 80 ಮೀಟರ್ ಕುಡಿಯುವ ನೀರಿನ ಪೈಪ್‌ಲೈನ್ ಬದಲಾವಣೆ ಮಾಡಬೇಕಿತ್ತು. ಅಂಬೇಡ್ಕರ್ ನಗರದ ನಿವಾಸಿಗಳು ಒಳ ಚರಂಡಿ ವ್ಯವಸ್ಥೆ ಸುಧಾರಣೆ ಸೇರಿದಂತೆ ಕೆಲವು ಬೇಡಿಕೆ ಇಟ್ಟಿದ್ದಾರೆ. ಅಂಬೇಡ್ಕರ್ ನಗರ ಬಡವರು

> ಇದರ ನಡುವೆ ರೈಲ್ವೆ ಹಳಿ ಮೇಲೆ 42 ಮೀಟರ್‌ನ ಸ್ಟೀಲ್ ಬ್ರಿಡ್ಜ್ ಬರಲಿದೆ. ಮುಂದಿನ ಹದಿನೈದು ದಿನಗಳಲ್ಲಿ ಅದನ್ನು ಜೋಡಿಸಲಾಗುತ್ತದೆ. ಐದಾರು ತಿಂಗಳಲ್ಲಿ ಈ ಕಾಮಗಾರಿಯನ್ನು ಪೂರ್ಣಗೊಳಿಸುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ಹಿರಿಯ ಅಧಿಕಾರಿಗಳು ಆಸಕ್ತಿ ತೆಗೆದುಕೊಂಡಿದ್ದಾರೆ. ನಾನೂ ಮೇಲಿಂದ ಮೇಲೆ ಯೋಜನೆಯ ಪ್ರಗತಿ ಪರಿಶೀಲನೆ ಮಾಡುತ್ತೇನೆ. ಈ ವಿಚಾರವಾಗಿ ರೈಲ್ವೆ ಇಲಾಖೆಯ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೇಳಿದರು.

ವಾಸಿಸುವ ಪ್ರದೇಶವಾಗಿದ್ದು, ಈ ಕುರಿತು ಈ ಪ್ರದೇಶದ ಉಸ್ತುವಾರಿ ನೋಡಿಕೊಳ್ಳುತ್ತಿರುವ ಸಹಾಯಕ ಆಯುಕ್ತ ಗಂಗಪ್ಪ ಅವರೊಂದಿಗೆ ಮಾತನಾಡಿದ್ದೇನೆ. ಅವರು ಕೂಡಲೇ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ. ಆದಷ್ಟು ಬೇಗನೆ ಹೊಂಬಳ ಮತ್ತು ಅಂಬೇಡ್ಕರ್ ನಗರದ ಕಡೆಗಿನ ಎರಡೂ ಕಾಮಗಾರಿಗಳು ಏಕಕಾಲಕ್ಕೆ ಆರಂಭವಾಗಲಿವೆ ಎಂದರು.

ಈ ಸಂದರ್ಭದಲ್ಲಿ ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದರು.





## ಡಿ.30ರಂದು ವಿದ್ಯುತ್ ವ್ಯತ್ಯಯ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

110 ಕವಿ ಲಕ್ಷ್ಮೇಶ್ವರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಡಿ.30ರಂದು ತ್ರೈಮಾಸಿಕ ನಿರ್ವಹಣಾ ಕಾರ್ಯ ಕೈಗೊಳ್ಳುವುದರಿಂದ ಮುಂಜಾನೆ 9 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

110 ಕೆವಿ ಲಕ್ಷ್ಮೇಶ್ವರ ಉಪಕೇಂದ್ರದಿಂದ ಪೂರೈಕೆಯಾಗುವ 33 ಕೆವಿ ಎಂಎಂಸಿಎಲ್ ಗಾಳಿಯಂತ್ರ ಘಟಕ, 33 ಕೆವಿ ಸೋಮೇಶ್ವರ ಸ್ಪಿನ್ನಿಂಗ್ ನಿಲ್, ವಿನ್ಸಾಲ್ ಸೋಲಾರ್, ಮವ್‌ಯಥೋ ಸೋಲಾರ್, ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳ 11 ಕೆವಿ ವಿತರಣಾ ಮಾರ್ಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆಯನ್ನು ಗಮನಿಸಿ, ಕಂಪನಿಯೊಂದಿಗೆ ಸಹಕರಿಸುವಂತೆ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

### ಡಾ. ಮನಮೋಹನ್ ಸಿಂಗ್ ಅಗಲಿಕೆಗೆ ಶಾಸಕ ಜಿ.ಎಸ್. ಪಾಟೀಲ ಕಂಬನಿ


# ಮೌನದ ಹಿಂದೆ ಅಡಗಿತ್ತು ಆರ್ಥಿಕ ಶಕ್ತಿ

**■ವಿಜಯಸಾಕ್ಷಿ ಸುದ್ದಿ, ರೋಣ**

ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ನಿಧನ ಆಘಾತ ತಂದಿದೆ. ಅವರ ಮೌನದ ಹಿಂದೆ ದೇಶದ ಅರ್ಥಿಕ ಶಕ್ತಿ ಅಡಗಿತ್ತು. ಅವರು ಅಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಆರ್ಥಿಕ ವ್ಯವಸ್ಥೆಯನ್ನು ಸರಿದಾರಿಗೆ ತರುವ ಮೂಲಕ ದೇಶವನ್ನು ಕಾಪಾಡಿದ ಮಹಾನ್ ವ್ಯಕ್ತಿಯಾಗಿದ್ದರು ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶುಕ್ರವಾರ ಪಕ್ಷದ ಕಾರ್ಯಾಲಯದಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತ ಡಾ. ಸಿಂಗ್ ಅವರ ಅಗಲಿಕೆಗೆ ಕಂಬನಿ ಮಿಡಿದರು.

ಮಾಜಿ ಪ್ರದಾನಿ ದಿವಂಗತ ಡಾ. ಮನಮೋಹನ್ ಸಿಂಗ್ ಅವರು ತಮ್ಮ ಆಡಳಿತದ ಅವಧಿಯಲ್ಲಿ ಸಾಕಷ್ಟು ಸುಧಾರಣೆಗಳನ್ನು ಜಾರಿಗೆ ತಂದರು. ಜನರು ಹಸಿವಿನಿಂದ ಬಳಲಬಾರದು ಎಂಬ ದೃಷ್ಟಿಯಿಂದ ಆಹಾರ ಭದ್ರತೆಯನ್ನು ಜಾರಿಗೆ ತಂದ ಮೊದಲ ಪ್ರದಾನಿ ಎಂಬ



ಹೆಗ್ಗಳಿಕೆಯನ್ನು ಪಡೆದವರು.

ಅಲ್ಲದೆ ಮಾಹಿತಿ ಹಕ್ಕು ಸೇರಿ ಅತ್ಯಂತ ಪ್ರಮುಖವಾದ ಉದ್ಯೋಗ ಖಾತ್ರಿ ಯೋಜನೆಯನ್ನು ಜಾರಿಗೊಳಿಸಿ ದೇಶದ ಜನರು ಗುಳೆ ಹೊಗುವುದನ್ನು ತಪ್ಪಿಸಿದರು.

ಇಂತಹ ಮಹಾನ್ ಚೇತನ ನಮ್ಮನ್ನು ಅಗಲಿದ್ದು ಅತೀವ ದುಃಖ ತರಿಸಿದೆ ಎಂದ ಅವರು, ದೇವರು ಅವರ ಕುಟುಂಬಕ್ಕೆ ಅಗಲಿಕೆಯ ನೋವನ್ನು ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದರು.

ವಿ.ಆರ್. ಗುಡಿಸಾಗರ, ಪುರಸಭೆ ಸದಸ್ಯ ಸಂಗನಗೌಡ ಪಾಟೀಲ, ಬಸವರಾಜ ನವಲಗುಂದ, ಯೂಸುಫ್ ಇಟಗಿ, ವಿ.ಬಿ. ಸೋಮನಕಟ್ಟಿಮಠ, ತಾ.ಪಂ ಮಾಜಿ ಸದಸ್ಯರಾದ ಪ್ರಭು ಮೇಟಿ, ಅಂದಪ್ಪ ಬಿಚ್ಚೂರ, ಆನಂದ ಚಂಗಳಿ, ಇಸ್ಮಾಹಿಲ್ ಹೊರಪೇಟಿ, ಬಸವರಾಜ ತಳವಾರ, ಅಪ್ಪು ಗಿರಡ್ಡಿ, ಸಂಗು ನವಲಗುಂದ, ಅಸ್ಲಂ ಕೊಪ್ಪಳ, ಮಲ್ಲು ರಾಯನಗೌಡ್ರ, ಯಲ್ಲಪ್ಪ ಕಿರೇಸೂರ, ಸಂಜಯ ದೊಡ್ಡಮನಿ, ಶಿವು ಹುಲ್ಲೂರ, ಮೌನೇಶ ಹಾದಿಮನಿ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

## ಕಾಂಗ್ರೆಸ್ ಕಚೇರಿಯಲ್ಲಿ ಡಾ. ಸಿಂಗ್‌ರಿಗೆ ನಮನ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜಗತ್ತಿನಲ್ಲಿಯೇ ಓರ್ವ ಶ್ರೇಷ್ಠ ಆರ್ಥಿಕ ತಜ್ಞ ಎಂದು ಹೆಸರು ಮಾಡಿದ್ದ, ಭಾರತದ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸುವ ನಿಟ್ಟಿನಲ್ಲಿ ತಮ್ಮದೇ ಆದ ಹೊಸ ವಿಚಾರಗಳನ್ನು ಅಳವಡಿಸಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದ ಡಾ. ಮನಮೋಹನ್ ಸಿಂಗ್ ಅವರ ನಿಧನದಿಂದ ಭಾರತ ಆಧುನಿಕತೆಯ ಹರಿಕಾರನೋರ್ವನನ್ನು ಕಳೆದುಕೊಂಡಂತಾಗಿದೆ ಎಂದು ಮಾಜಿ ಶಾಸಕ ರಾಮಣ್ಣ ಲಮಾಣಿ ಮತ್ತು ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಹೇಳಿದರು.

ಅವರು ಗುರುವಾರ ರಾತ್ರಿ ನಿಧನರಾದ ಮಾಜಿ ಪ್ರಧಾನಿ, ಭಾರತರತ್ನ ಡಾ.ಮನಮೋಹನ್‌ಸಿಂಗ್ ಅವರಿಗೆ ಶುಕ್ರವಾರ ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಶ್ರದ್ಧಾಂಜಲಿ ಅರ್ಪಿಸಿ, ಸಂತಾಪ ಸೂಚಕ ಸಭೆಯಲ್ಲಿ ಮಾತನಾಡಿದರು.

ಸಿಂಗ್ ಅವರ ಆರ್ಥಿಕ ಚಿಂತನೆಗಳು ಇಂದು ಭಾರತವನ್ನು ಪ್ರಗತಿಯತ್ತ ನಡೆಸಿದೆ. ಅವರು ಅಪರೂಪದ ರಾಜಕಾರಣಿ, ದೂರದೃಷ್ಟಿ ಉಳ್ಳ ಪ್ರಧಾನಿಯಾಗಿದ್ದರು. ದೇಶವನ್ನು ಆರ್ಥಿಕ ಸಂಕಷ್ಟದಿಂದ ದೂರ ಮಾಡಿದವರು. ಆರ್‌ಬಿಐ ಗವರ್ನರ್ ಆಗಿ, ವಿಶ್ವಬ್ಯಾಂಕಿನ ಭಾರತದ ಪ್ರತಿನಿಧಿಯಾಗಿ ಭಾರತದ ಆರ್ಥಿಕ ಪರಿಸ್ಥಿತಿ ಸುಧಾರಿಸಲು ಅವರು ಸಂಪೂರ್ಣ ಶ್ರಮಿಸಿದ್ದರು. ಮೃದು ಸ್ವಭಾವದ ಚಿಂತನಾಶೀಲ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಆರ್. ಕೊಪ್ಪದ, ನಗರ ಅಧ್ಯಕ್ಷ ಅಮರೇಶ ತೆಂಬದಮನಿ, ಬಸವರಾಜ ಹೊಳಲಾಪೂರ, ಬಸವರಾಜ ಓದುನವರ, ವೆಂಕಟೇಶ ಮಾತಾಡೆ, ಶೇಖಣ್ಣ ಲಮಾಣಿ, ಕಿರಣ ನವಲೆ, ಪ್ರಕಾಶ ಕೊಂಚಿಗೇರಿಮಠ, ಶಶಿಕಲಾ ಬಡಿಗೇರ, ಫಕ್ಕಿರೇಶ ನಂದೆಣ್ಣವರ, ಶಿವಾನಂದ ಲಿಂಗಶೆಟ್ಟಿ, ಮಹೇಶ ಸೂರಣಗಿ, ಮಂಜುನಾಥ ಬಟ್ಟೂರ, ಅಬ್ಜಲ್ ರಿತ್ತಿ, ಮುದಕಣ್ಣ ಗದ್ದಿ, ಮುತ್ತಣ್ಣ ಟೋಕಾಳಿ ಮುಂತಾದವರಿದ್ದರು.

### ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಡಾ. ಮನಮೋಹನ್ ಸಿಂಗ್‌ರಿಗೆ ಭಾವಪೂರ್ಣ ಶ್ರದ್ಧಾಂಜಲಿ

# ಡಾ. ಸಿಂಗ್ ಮುತ್ಸದ್ದಿ ರಾಜಕಾರಣಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಭಾರತೀಯ ಜನತಾ ಪಾರ್ಟಿ ಜಿಲ್ಲಾ ಕಾರ್ಯಾಲಯದಲ್ಲಿ ಮಾಜಿ ಪ್ರಧಾನಿ ಡಾ. ಮನ್‌ಮೋಹನ್ ಸಿಂಗ್ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಯನ್ನು ಅರ್ಪಿಸಲಾಯಿತು.

ಮಾಜಿ ಮುಖ್ಯಮಂತ್ರಿ, ಹಾಲಿ ಸಂಸದರಾದ ಬಸವರಾಜ ಬೊಮ್ಮಾಯಿ ಮಾತನಾಡಿ, ಮನ್‌ಮೋಹನ್ ಸಿಂಗ್ ಅವರು ಶ್ರೇಷ್ಠ ಆರ್ಥಿಕ ತಜ್ಞರಾಗಿ, ಹಣಕಾಸು ಸಚಿವರಾಗಿ, ರಿಸರ್ವ್ ಬ್ಯಾಂಕ್ ಗರ್ವನರ್ ಆಗಿ, ರಾಷ್ಟ್ರೀಯ ಯೋಜನಾ ಆಯೋಗದ ಉಪಾಧ್ಯಕ್ಷರಾಗಿ ಹತ್ತು ವರ್ಷಗಳ ಕಾಲ ದೇಶದ ಪ್ರಧಾನಿಯಾಗಿ, ಸರ್ವಾಂಗೀಣ ಅಭಿವೃದ್ಧಿಗಾಗಿ ಶ್ರಮಿಸಿದ್ದು, ಅವರೊಬ್ಬ ಮುತ್ಸದ್ದಿ



ರಾಜಕಾರಣಿಯಾಗಿದ್ದರು. ಆರ್ಥಿಕ ಸುಧಾರಣೆಯ ಹರಿಕಾರರಾಗಿ ಭಾರತದ ಆರ್ಥಿಕತೆಯ ಹೆಬ್ಬಾಗಿಲನ್ನು ತೆರೆದರು. ಭಾರತದ ಪ್ರಗತಿಗೆ ಅವರು ಅಮೂಲ್ಯವಾದ ಸೇವೆಯನ್ನು ಸಲ್ಲಿಸಿದ್ದಾರೆಂದರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ, ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ, ಹಿರಿಯರಾದ ಎಂ.ಎಸ್. ಕರಿಗೌಡ್ರ, ನಾಗರಾಜ ಕುಲಕರ್ಣಿ, ರವಿ ದಂಡಿನ, ಪಕ್ಕಿರೇಶ ರಟ್ಟಿಹಳ್ಳಿ, ಸಿದ್ದು ಪಲ್ಲೇದ, ಅನಿಲ ಅಬ್ಬಿಗೇರಿ, ರವಿ ಕರಿಗಾರ, ಭದ್ರೇಶ ಕುಸ್ಲಾಪೂರ, ಬಿ.ಎಸ್. ಚಿಂಚಲಿ, ರಾಮಣ್ಣ ಕಮ್ಮಾರ, ಬೂದಪ್ಪ ಹಳ್ಳಿ, ನಿಂಗಪ್ಪ ಕೆಂಗಾರ, ಕೆ.ಪಿ. ಕೋಟಿಗೌಡ್ರ, ಸುರೇಶ ಮರಳಪ್ಪನವರ, ಅಶೋಕ ಸಂಕಣ್ಣವರ, ಕಿರಣ ಭೂಮಾ, ರಮೇಶ ಸಜ್ಜಗಾರ, ಹೇಮಗಿರಿಶ ಹಾವಿನಾಳ, ಶಿವು ಹಿರೇಮನಿಪಾಟೀಲ, ಸಂತೋಷ ಅಕ್ಕಿ, ಮಂಜುನಾಥ ಮುಳಗುಂದ, ಅಮರನಾಥ ಗಡಗಿ, ಮಂಜುನಾಥ ಶಾಂತಗೇರಿ, ನಿರ್ಮಲಾ ಕೊಳ್ಳಿ, ವಿಜಯಲಕ್ಷ್ಮೀ ಮಾನ್ವಿ, ಪದ್ಮಿನಿ ಮುತ್ತಲದಿನ್ನಿ, ಸ್ವಾತಿ ಅಕ್ಕಿ, ಕವಿತಾ ಬಂಗಾರಿ, ಯೋಗೇಶ್ವರ ಭಾವಿಕಟ್ಟಿ, ಮೇಘಾ ಕೊಟ್ಟೂರ, ಕಮಲಾಕ್ಷೀ ತಕ್ಕಲಕೋಟಿ, ಗಣೇಶ ಗಂಟಿ, ಮಾಂತೇಶ ಬಾತಾಖಾನಿ, ಬಸವರಾಜ ಇಟಗಿ, ಅಮರನಾಥ ಬೆಟಗೇರಿ, ವಾಯ್.ಪಿ. ಅಡ್ನೂರ, ಎಪ್.ಎಸ್. ಗೊಡಿ, ಪ್ರವೀಣ ಛಬ್ಬಿ, ವಿನೋದ ಹಂಸನೂರ, ಮಂಜುನಾಥ ಪಟ್ಟಣಶೆಟ್ಟಿ ಮುಂತಾದವರು ಇದ್ದರು.

## ಸಂಪಾದಕೀಯ

# ಅರ್ಥ ಕ್ರಾಂತಿಯ ಹರಿಕಾರ

1991ರಲ್ಲಿ ನರಸಿಂಹರಾವ್ ಸರಕಾರದಲ್ಲಿ ಡಾ. ಮನಮೋಹನ್ ಸಿಂಗ್ ವಿತ್ತ ಸಚಿವರಾಗಿ ಅಧಿಕಾರ ವಹಿಸಿಕೊಂಡು, ದೇಶಕ್ಕೆ ಆರ್ಥಿಕ ಶಿಸ್ತು ರೂಪಿಸದಿದ್ದರೆ ಇವತ್ತು ಭಾರತ ಬಲಾಢ್ಯ ರಾಷ್ಟ್ರಗಳಲ್ಲಿ ಒಂದಾಗುತ್ತಿರಲಿಲ್ಲ. ಅಂಥ ಧೀಮಂತ ನಾಯಕ ಡಾ. ಮನಮೋಹನ್ ಸಿಂಗ್ ಇಹಲೋಕ ತ್ಯಜಿಸಿದ್ದಾರೆ.

ಸುದೀರ್ಘ ರಾಜಕೀಯ ಜೀವನದಲ್ಲಿ ಟೀಕೆಗಳಿಗೆ ಉತ್ತರಿಸಿದೆ ಜ್ಞಾನಿಯಾಗಿದ್ದರೂ ಮೌನವಾಗಿ ಕೆಲಸ ಮಾಡಿದವರು ಸಿಂಗ್. ಮುಂದೆ ಸುದೀರ್ಘ 10 ವರ್ಷಗಳ ಕಾಲ ಪ್ರಧಾನಿಯಾಗಿ ಬಡವರ ಕಲ್ಯಾಣಕ್ಕಾಗಿ ಮಾಡಿದ ಉದ್ಯೋಗ ಖಾತ್ರಿ ಯೋಜನೆ, ಮಾಹಿತಿ ಹಕ್ಕು ಕಾಯಿದೆ ಜಾರಿ ಮೂಲಕ ದೇಶದ ಆಡಳಿತದಲ್ಲಿ ಪಾರದರ್ಶಕತೆ, ನಾಗರಿಕ ಪರಮಾಣು ಒಪ್ಪಂದ, ಆಧಾರ್ ಯೋಜನೆ, 2008ರ ಜಾಗತಿಕ ಆರ್ಥಿಕ ಬಿಕ್ಕಟ್ಟು ಎದುರಿಸಲು ಸಿಂಗ್ ನೀಡಿದ ಸಲಹೆಗಳು ಈ ದೇಶವನ್ನು ಸುಭದ್ರಗೊಳಿಸಿವೆ.

ಆದರೆ ಮುಂದೆ ಎನ್ ಡಿಎ ನೇತೃತ್ವದ ಸರಕಾರ ಅಧಿಕಾರಕ್ಕೆ ಬಂದ ನಂತರ ಕೈಗೊಂಡು ಆರ್ಥಿಕ ನೀತಿಗಳು ದೇಶದ ಜನರ ಬದುಕನ್ನು ಅಸಹನೀಯಗೊಳಿಸಿದವು. ದೂರದೃಷ್ಟಿ ಇಲ್ಲದ ಆರ್ಥಿಕ ನೀತಿಗಳಿಂದ ಜನಸಾಮಾನ್ಯರು ಸಾಕಷ್ಟು ತೊಂದರೆ ಅನುಭವಿಸಿದರು. ಜಿಎಸ್ ಟಿ ಹೆಸರಿನ ತೆರಿಗೆ ಪದ್ಧತಿ ಒಂದಷ್ಟು ಶಿಸ್ತು ಮೂಡಿಸಿತಾದರೂ ಪ್ರತಿಯೊಂದಕ್ಕೂ ತೆರಿಗೆ ವಿಧಿಸುವ ಮೂಲಕ ಅಗತ್ಯ ವಸ್ತುಗಳ ಬೆಲೆ ಗಗನಕ್ಕೆ ಏರಲು ಕಾರಣವಾಯಿತು.

ಕಳೆದ 10 ವರ್ಷಗಳಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆ ನಿಯಂತ್ರಣ ಮಾಡಲು ಇಂದಿನ ಸರಕಾರಕ್ಕೆ ಸಾಧ್ಯವಾಗುತ್ತಿಲ್ಲ. ಡಾಲರ್ ಎದುರು ರೂಪಾಯಿ ಮೌಲ್ಯ ಕುಸಿಯುವುದನ್ನು ತಡೆಯಲು ಸಾಧ್ಯವಾಗುತ್ತಿಲ್ಲ. ತಲಾ ಆದಾಯ ಹೆಚ್ಚಳ ಮಾಡಲು ಸಾಧ್ಯವಾಗುತ್ತಿಲ್ಲ. ಇಂಥ ಆರ್ಥಿಕ ಸಂದಿಗ್ಧ ಪರಿಸ್ಥಿತಿಯಲ್ಲಿ ಡಾ. ಮನಮೋಹನ್ ಸಿಂಗ್ ಅವರ ಮಾರ್ಗದರ್ಶನ ಈ ದೇಶಕ್ಕೆ ಅಗತ್ಯವಾಗಿತ್ತು.

ಆದರೆ ವಯೋಸಹಜ ಕಾರಣದಿಂದ ಸಿಂಗ್ ಭೌತಿಕವಾಗಿ ಅಗಲಿದ್ದಾರೆ. ಅವರ ಅಗಲಿಕೆ ಈ ದೇಶಕ್ಕೆ ತುಂಬಲಾರದ ನಷ್ಟ. ಜಗತ್ತಿನ ಒಬ್ಬ ಶ್ರೇಷ್ಠ ಆರ್ಥಿಕ ತಜ್ಞನನ್ನು ಕಳೆದುಕೊಂಡಿದೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ. ಅವರ ಆರ್ಥಿಕ ನೀತಿಗಳನ್ನು ಅರ್ಥೈಸಿಕೊಂಡು ಮುನ್ನಡೆಯುವ ಮನಸ್ಥಿತಿಯನ್ನು ಈಗಿನ ಸರಕಾರ ತೋರಿದರೆ, ಅದೇ ಮನಮೋಹನ್ ಸಿಂಗ್ ಅವರಿಗೆ ಸಲ್ಲಿಸುವ ನಿಜವಾದ ಶ್ರದ್ಧಾಂಜಲಿ.

## ಮೇಘಾಲಯ। ಚರ್ಚ್‌ನಲ್ಲಿ 'ಜೈ ಶ್ರೀರಾಮ್' ಎಂದು ಘೋಷಣೆ ಕೂಗಿದ ವ್ಯಕ್ತಿ; ದೂರು ದಾಖಲು



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮೇಘಾಲಯದ ಪೂರ್ವ ಖಾಸಿ ಹಿಲ್ಸ್ ಜಿಲ್ಲೆಯ ಚರ್ಚ್‌ನೊಳಗೆ ಅತಿಕ್ರಮಣ ಮಾಡಿ 'ಜೈ ಶ್ರೀ ರಾಮ್' ಎಂದು ಕೂಗುವ ಮೂಲಕ ಜನರ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದ ಆರೋಪದ ಮೇಲೆ ಮೇಘಾಲಯ ಪೊಲೀಸರು ವ್ಯಕ್ತಿಯ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ಶುಕ್ರವಾರ ತಿಳಿಸಿದ್ದಾರೆ.

ವ್ಯಕ್ತಿಯೊಬ್ಬ ಗುರುವಾರ ಮಾವ್ಲಿನ್ನಾಂಗ್ ಗ್ರಾಮದ ಚರ್ಚ್‌ಗೆ ಪ್ರವೇಶಿಸಿ 'ಜೈ ಶ್ರೀ ರಾಮ್' ಎಂದು ಕೂಗಿ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾನೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಮೇಘಾಲಯ ಮುಖ್ಯಮಂತ್ರಿ ಕಾನ್ರಾಡ್ ಕೆ ಸಂಗ್ಮಾ ಅವರು ಈ ಕೃತ್ಯವನ್ನು ಖಂಡಿಸಿದ್ದು, ಜನರ ಶಾಂತಿಯುತ ಸಹಬಾಳ್ವೆಯನ್ನು ಹಾಳುಮಾಡಲು ಉದ್ದೇಶಿಸಿರುವ ವ್ಯಕ್ತಿಗೆ ಆಡಳಿತಾತ್ಮಕ ಕಾನೂನು ಪ್ರಕ್ರಿಯೆಗಳು ನಡೆಯುತ್ತಿವೆ ಎಂದು ಹೇಳಿದ್ದಾರೆ. "ಈ ಕ್ರಮವು ಉದ್ದೇಶಪೂರ್ವಕವಾಗಿ ತೋರುತ್ತಿದೆ. ಸಾಮಾಜಿಕ, ಧಾರ್ಮಿಕ ಮತ್ತು ಕೋಮು ಸೌಹಾರ್ದತೆ ಸೃಷ್ಟಿಸುವುದನ್ನು ತಡೆಯಲು ರಾಜ್ಯ ಸರ್ಕಾರವಾಗಿ ನಾವು ಯಾವುದೇ ಅವಕಾಶವನ್ನೂ ಬಿಡುವುದಿಲ್ಲ. ಕಾನೂನು ಕ್ರಮ ನಡೆಯುತ್ತಿದೆ" ಎಂದು ಸಿಎಂ ತಿಳಿಸಿದ್ದಾರೆ.

ಈಸ್ಟ್ ಖಾಸಿ ಹಿಲ್ಸ್ ಎಸ್‌ಪಿ ಸಿಲ್ವೆಸ್ಟರ್ ನಾಂಗ್ಟಿಂಗರ್ ಮಾತನಾಡಿ, "ಈ ಸಂಬಂಧ ದೂರು ದಾಖಲಿಸಿದ ನಂತರ ನಾವು ಇನ್‌ಸ್ಟಾಗ್ರಾಮ್‌ನಲ್ಲಿ ಆಕಾಶ್ ಸಾಗರ್ ಎಂಬ ವ್ಯಕ್ತಿಯ ವಿರುದ್ಧ ಪೈನೂರ್ಸ್ಲಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದೇವೆ. ತನಿಖೆ ನಡೆಯುತ್ತಿದ್ದು, ಆರೋಪಿಯನ್ನು ಪತ್ತೆ ಹಚ್ಚುವ ಪ್ರಯತ್ನ ನಡೆಯುತ್ತಿದೆ" ಎಂದು ಹೇಳಿದರು.

## ದೇವಾಲಯಗಳನ್ನು ರಾಜ್ಯ ಸರ್ಕಾರಗಳ ನಿಯಂತ್ರಣದಿಂದ ಮುಕ್ತಗೊಳಿಸುವಂತೆ ವಿಎಚ್‌ಪಿ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಆಂಧ್ರಪ್ರದೇಶದ ವಿಜಯವಾಡದ

ಹಿಂದೂ ದೇವಾಲಯಗಳನ್ನು ರಾಜ್ಯ ಸರ್ಕಾರದ ನಿಯಂತ್ರಣದಿಂದ ಮುಕ್ತಗೊಳಿಸುವ ಉದ್ದೇಶದಿಂದ ರಾಷ್ಟ್ರವ್ಯಾಪಿ ಅಭಿಯಾನವನ್ನು ಪ್ರಾರಂಭಿಸುವ ಯೋಜನೆಯನ್ನು, ಬಿಜೆಪಿ ಬೆಂಬಲಿತ ಸಂಘಟನೆಯಾದ ವಿಶ್ವ ಹಿಂದೂ ಪರಿಷತ್ (ವಿಎಚ್‌ಪಿ) ಗುರುವಾರ ಪ್ರಕಟಿಸಿದೆ. ಜನವರಿ 5 ರಂದು ಆಂಧ್ರಪ್ರದೇಶದ ವಿಜಯವಾಡದಲ್ಲಿ ಸಾರ್ವಜನಿಕ ಜಾಗೃತಿ ಕಾರ್ಯಕ್ರಮದೊಂದಿಗೆ ಅಭಿಯಾನ ಪ್ರಾರಂಭವಾಗಲಿದೆ.

ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ವಿಎಚ್‌ಪಿ ಸಂಘಟನಾ ಪ್ರಧಾನ ಕಾರ್ಯದರ್ಶಿ ಮಿಲಿಂದ್ ಪರಾಂಡೆ, "ಸಮುದಾಯದ ಸದಸ್ಯರಿಂದ ಹಿಂದೂ ದೇವಾಲಯಗಳ ಆಡಳಿತ ಮತ್ತು ನಿರ್ವಹಣೆಗೆ ಕರಡು ಕಾನೂನನ್ನು ಈಗಾಗಲೇ ಸಿದ್ಧಪಡಿಸಲಾಗಿದೆ. ನಾನು ಕೆಲವು ದಿನಗಳ ಹಿಂದೆ ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರ ಪರಿಗಣನೆಗೆ ಕರಡು ಪ್ರತಿಯನ್ನು ನೀಡಿದ್ದೇನೆ" ಎಂದು ಅವರು ಹೇಳಿದರು.

ನಿವೃತ್ತ ಮುಖ್ಯ ನ್ಯಾಯಮೂರ್ತಿಗಳು, ಸುಪ್ರೀಂ ಕೋರ್ಟ್ ವಕೀಲರು, ಧಾರ್ಮಿಕ ಮುಖಂಡರು ಮತ್ತು ವಿಎಚ್‌ಪಿ ಕಾರ್ಯಕರ್ತರನ್ನು ಒಳಗೊಂಡಿರುವ ಚಿಂತಕರ ಚಾವಡಿಯಿಂದ ರಚಿಸಲಾದ ಕರಡು ಕಾನೂನು, ದೇವಸ್ಥಾನದ ಆಡಳಿತವನ್ನು ಹಿಂದೂ ಸಮಾಜವು ನಿರ್ವಹಿಸುವ ಚೌಕಟ್ಟನ್ನು ವಿವರಿಸುತ್ತದೆ. "ನಾವು ಕಳೆದ 2-3 ವರ್ಷಗಳಿಂದ ಅದರ ಮೇಲೆ ಕೆಲಸ ಮಾಡುತ್ತಿದ್ದೇವೆ" ಎಂದು ಪರಾಂಡೆ ಹೇಳಿಕೊಂಡಿದ್ದಾರೆ.

---

**ಹುಬ್ಬಳ್ಳಿಯ ಸಿಲಿಂಡರ್ ಸ್ಫೋಟ ಪ್ರಕರಣ । ಮೃತರ ಕುಟುಂಬಕ್ಕೆ ರೂ. 5 ಲಕ್ಷ ಪರಿಹಾರ-ಸಚಿವ ಸಂತೋಷ ಲಾಡ್**

# ಇಂತಹ ಘಟನೆಗಳು ಮರುಕಳಿಸದಿರಲಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿಯ ಸಾಯಿನಗರದ ಅಚ್ಚವ್ವನ ಕಾಲೋನಿಯ ಈಶ್ವರ ದೇವಸ್ಥಾನದಲ್ಲಿ ಅಡುಗೆ ಅನಿಲ (ಸಿಲಿಂಡರ್ ) ಸ್ಫೋಟಗೊಂಡು 9 ಅಯ್ಯಪ್ಪ ಮಾಲಾಧಾರಿಗಳು ಗಂಭೀರವಾಗಿ ಗಾಯಗೊಂಡು, ಕೆಎಂಸಿಆರ್‌ಐನಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. 9 ಅಯ್ಯಪ್ಪ ಮಾಲಾಧಾರಿಗಳು ಪೈಕಿ ನಿಜಲಿಂಗಪ್ಪ ಬೇಪುರಿ ಹಾಗೂ ಸಂಜಯ ಸವದತ್ತಿ ಅವರು ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾರೆ. ಈ ಘಟನೆಯನ್ನು ವಿಶೇಷ ಪ್ರಕರಣ ಎಂದು ಪರಿಗಣಿಸಿ, ಮೃತರ ಕುಟುಂಬಕ್ಕೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ರೂ.5 ಲಕ್ಷ ಪರಿಹಾರವನ್ನು ಘೋಷಿಸಲಾಗಿದೆ ಎಂದು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.



ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ (ಕೆಎಂಸಿ&ಆರ್‌ಐ)ಗೆ ಭೇಟಿ ನೀಡಿದ ಸಂದರ್ಭದಲ್ಲಿ ಪತ್ರಕರ್ತರೊಂದಿಗೆ ಅವರು ಮಾತನಾಡಿ, ರಾಜ್ಯ ಸರ್ಕಾರ, ಜಿಲ್ಲಾಡಳಿತ ಹಾಗೂ ಕೆಎಂಸಿಆರ್‌ಐ ಸಂಸ್ಥೆಯು ಚಿಕಿತ್ಸೆಗೆ ಎಲ್ಲ ರೀತಿಯ ಪ್ರಯತ್ನಗಳನ್ನು ಮಾಡಲಾಗಿತ್ತು. ಅಲ್ಲದೇ ಬೇರೆ ಕಡೆಯ ವಿಶೇಷ ತಜ್ಞ ವೈದ್ಯರು ಮತ್ತು ಪ್ಲಾಸ್ಟಿಕ್ ಸರ್ಜನ್‌ಗಳನ್ನು ಕರೆಸಿ, ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ ಶೇ.80 ರಿಂದ 90ರಷ್ಟು ದೇಹವು ಸುಟ್ಟಿರುವ ಕಾರಣ ಅವರನ್ನು ಉಳಿಸಿಕೊಳ್ಳಲು ಸಾಧ್ಯವಾಗಲಿಲ್ಲ. ಮೃತರ ಕುಟುಂಬಸ್ಥರಿಗೆ ನಷ್ಟವನ್ನು ಭರಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ಪ್ರಾರ್ಥಿಸುತ್ತೇನೆ. ಮುಖ್ಯಮಂತ್ರಿಗಳು ಸಹ ಮೃತರಿಗೆ ಸಾಂತ್ವನ ತಿಳಿಸಿದ್ದಾರೆ ಎಂದರು.

ಉಳಿದ ಗಾಯಾಳುಗಳಿಗೆ ಚಿಕಿತ್ಸೆ ಮುಂದುವರೆಯುತ್ತಿದ್ದು, ವಿನಾಯಕ ಎಂಬ ಯುವಕನನ್ನು ಬರ್ನ್ ವಾರ್ಡ್‌ಗೆ ಸ್ಥಳಾಂತರ ಮಾಡಲಾಗಿದೆ. ಆತ ಚಿಕಿತ್ಸೆಗೆ ಸ್ಪಂದಿಸುತ್ತಿದ್ದು, ಗುಣಮುಖನಾಗುತ್ತಿದ್ದಾನೆ. ಉಳಿದವರ ಸ್ಥಿತಿ ಇನ್ನೂ ಗಂಭೀರವಾಗಿದೆ. ಅವರಿಗೆ 4 ಜನ ತಜ್ಞ ವೈದ್ಯರಿಂದ ಚಿಕಿತ್ಸೆ ನೀಡಲಾಗುತ್ತಿದೆ. ತಜ್ಞ ವೈದ್ಯರಿಂದ ಚಿಕಿತ್ಸೆ ಕುರಿತು ಮಾಹಿತಿ ಪಡೆದುಕೊಂಡಿದ್ದೇನೆ. ಕೆಎಂಸಿಆರ್‌ಐ ವೈದ್ಯರು ಹಾಗೂ ಕುಟುಂಬಸ್ಥರೊಂದಿಗೆ ಚಿಕಿತ್ಸೆ ಕುರಿತು ಸಮಾಲೋಚನೆ ನಡೆಸಿ ಚಿಕಿತ್ಸೆ ನೀಡಲಾಗುವುದು. ಇಂತಹ ಘಟನೆಗಳು ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗುವುದು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಪಾಲಿಕೆ ಸದಸ್ಯರಾದ ರಾಜಣ್ಣ ಕೊರವಿ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಪೊಲೀಸ್ ಆಯುಕ್ತರಾದ ಎನ್. ಶಶಿಕುಮಾರ್, ಡಿಸಿಪಿಗಳಾದ ಮಹಾನಿಂಗ ನಂದಗಾವಿ, ಕೆಎಂಸಿಆರ್‌ಐ ನಿರ್ದೇಶಕರಾದ ಡಾ. ಎಸ್.ಎಫ್. ಕಮ್ಮಾರ, ಹುಬ್ಬಳ್ಳಿ ಶಹರ ತಹಸೀಲ್ದಾರ ಕಲಗೌಡ ಪಾಟೀಲ ಸೇರಿದಂತೆ ಅಧಿಕಾರಿಗಳು ಹಾಜರಿದ್ದರು.




---

**ಜನ ಜಾಗೃತಿ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ಗುಣ, ನಡವಳಿಕೆ ಕೊನೆಯವರೆಗೂ ಕಾಪಾಡುತ್ತದೆ

■ವಿಜಯಸಾಕ್ಷಿ ಸುದ್ದಿ, ತುಮಕೂರು



ಭರವಸೆ ಎಂಬುದು ಬದುಕಿನ ಜೀವಜಲ. ಅದನ್ನು ಬತ್ತಲು ಬಿಡಬಾರದು. ಬುದ್ಧಿವಂತಿಕೆ ಮತ್ತು ಪರಿಶ್ರಮ ನಮ್ಮನ್ನು ಎತ್ತರಕ್ಕೆ ಕರೆದುಕೊಂಡು ಹೋಗುತ್ತದೆ. ಆದರೆ ಗುಣ, ನಡವಳಿಕೆ ಕೊನೆಯವರೆಗೂ ಕಾಪಾಡುತ್ತದೆ. ಜೀವನದಲ್ಲಿ ಹಣದ ಕೊರತೆಯಿದ್ದರೂ ಗುಣದ ಕೊರತೆ ಇರಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಶ್ರೀ ವಿಶಾಲಾಕ್ಷಮ್ಮ ಸದಾಶಿವಯ್ಯ ಸಭಾಭವನದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಧನುರ್ಮಾಸದ ಇಷ್ಟಲಿಂಗ ಮಹಾಪೂಜಾ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬದುಕು ಬದಲಾಗಬೇಕಾದರೆ ಬದುಕುವ ದಾರಿ ಬದಲಾಗಬೇಕು. ಎಲ್ಲಾ ಇದ್ದಾಗ ನಮ್ಮವರು ಅಂತಾರೆ. ಏನು ಇಲ್ಲದಾಗ ಯಾರು ನೀ ಅಂತಾರೆ. ಇದೇ ಜೀವನ. ಗೆದ್ದ ವ್ಯಕ್ತಿಗೆ ಚಪ್ಪಾಳೆ ಹೊಡೆಯುವವರು ದೊಡ್ಡವರಾಗುವುದಿಲ್ಲ. ಬಿದ್ದ ವ್ಯಕ್ತಿಯನ್ನು ಕೈ ಹಿಡಿದು ಮೇಲೆತ್ತುವವರು ದೊಡ್ಡವರಾಗುತ್ತಾರೆ. ಆಧ್ಯಾತ್ಮದ ಅರಿವು ಆದರ್ಶಗಳು ಜೀವನ ವಿಕಾಸಕ್ಕೆ ಅಡಿಪಾಯ. ಶ್ರೀ ಜಗದ್ಗುರು ರೇಣುಕಾಚಾರ್ಯರು ವೀರಶೈವ ಧರ್ಮ ಸಂವಿಧಾನದಲ್ಲಿ ಕಾಯಕ ಜೀವನದಿಂದ ಬರುವ ಹಣದಲ್ಲಿ ದಾಸೋಹ ಮಾಡುವ ಉತ್ಕೃಷ್ಟ ವಿಚಾರಗಳನ್ನು ಬೋಧಿಸಿದ್ದಾರೆ. ವೈಚಾರಿಕತೆಯ ಬಿರುಗಾಳಿಯಲ್ಲಿ ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳು ನಾಶವಾಗಬಾರದು. ಅರಿತು-ಬೆರೆತು ಬಾಳುವುದು ಜೀವನದ ಶ್ರೇಯಸ್ಸಿಗೆ ಮೂಲವೆಂದರು.

ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು ಸಮಾರಂಭ ಉದ್ಘಾಟಿಸಿ ಮಾತನಾಡಿ, ಕರ್ತವ್ಯದ ಕಾಲು ದಾರಿ ಕೀರ್ತಿಯ ಹೆದ್ದಾರಿ. ಶ್ರಮ ಬದುಕು ಸಂಪತ್ತಿನ ಸಂವರ್ಧನೆಗೆ ಮೂಲ. ವೀರಶೈವ ಜ್ಞಾನ ಸಂಪತ್ತು ಅಪಾರ. ಅರಿತು ಆದರ್ಶ ಬದುಕು ಕಟ್ಟಿಕೊಳ್ಳಬೇಕೆಂದರು.

ನೇತೃತ್ವ ವಹಿಸಿದ ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವಬಂಧುತ್ವದ ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳು ನಮ್ಮೆಲ್ಲರ ಬಾಳಿಗೆ ನವ ಚೈತನ್ಯ ತುಂಬುತ್ತವೆ. ದ್ವೇಷ ಅಸೂಯೆ ಮರೆತು ಸಾಮರಸ್ಯದಿಂದ ಬದುಕಲು ಗುರುವಿನ ಮಾರ್ಗದರ್ಶನ ಅವಶ್ಯಕತೆ ಇದೆಯೆಂದರು.

ಬೆಳ್ಳಾವಿ ಮಠದ ಕಾರದ ವೀರಬಸವ ಸ್ವಾಮಿಗಳು ವೀರಶೈವ ಧರ್ಮ ಮತ್ತು ಗುರುವಿನ ಮಹತ್ವ ಕುರಿತು ಉಪನ್ಯಾಸವಿತ್ತರು. ಡಾ. ಎಸ್.ಪರಮೇಶ, ಎಂ.ಆರ್. ಹುಲಿನಾಯ್ಕರ್, ಟಿ.ಬಿ. ಶೇಖರ, ಕೆ.ಜಿ. ರುದ್ರಪ್ಪ, ಜಿ.ಮಲ್ಲಿಕಾರ್ಜುನಯ್ಯ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಸಿ.ವಿ. ಮಹಾದೇವಯ್ಯ, ಎಂ.ವಿ. ಮಹೇಶ್, ಜಿ.ಎಸ್. ಲಿಂಗರಾಜು, ಮರಿಬಸಪ್ಪ, ಎಸ್.ನಾಗರಾಜ ಮೊದಲಾದ ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಸಮಿತಿಯ ಅಧ್ಯಕ್ಷ ಟಿ.ಆರ್. ಸದಾಶಿವಯ್ಯ ಸ್ವಾಗತಿಸಿದರು. ಜಿ.ಎಸ್.ಸಿದ್ಧರಾಜು ನಿರೂಪಿಸಿದರು.

---

**ಶಿವಾನುಭವದ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ**

# ಅವ್ವ ನೀಡುವ ಸಂಸ್ಕಾರ ಬಹುದೊಡ್ಡದು

■ವಿಜಯಸಾಕ್ಷಿ ಸುದ್ದಿ, ಗದಗ



ನಮ್ಮ ದೇಶದಲ್ಲಿ ತಾಯಿಗೆ ಪೂಜ್ಯನೀಯ ಸ್ಥಾನವಿದೆ. ತಾಯಿಯೇ ದೇವರು ಎಂಬ ಸಂಸ್ಕೃತಿ ನಮ್ಮದು. ಪ್ರತಿಯೊಂದು ಮಗುವಿಗೂ ತಾಯಿಯೇ ಮೊದಲ ಗುರು ಎಂದು ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2725ನೇ ಶಿವಾನುಭವದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ಪ್ರಾಕೃತಿಕವಾಗಿ ಹೆಣ್ಣು ಮಕ್ಕಳಿಗೆ ಪ್ರೀತಿ, ತಾಳ್ಮೆ, ಅಂತಃಕರಣ ಸ್ವಾಭಾವಿಕವಾಗಿ ಬಂದಿರುತ್ತದೆ. ಇಂತಹ 'ಅವ್ವ'ನ ನೆನಪಿಗಾಗಿ ಬಸವರಾಜ ಹೊರಟ್ಟಿಯವರು ಅವ್ವ ಸೇವಾ ಟ್ರಸ್ಟ್ ಸ್ಥಾಪಿಸಿ, ಆ ಮೂಲಕ ಮಾನವೀಯ ಮೌಲ್ಯಗಳನ್ನು ಬಿತ್ತುತ್ತಿದ್ದಾರೆ. ಮಕ್ಕಳಿಗೆ ಸಂಸ್ಕಾರ ಕೊಟ್ಟು ಪೋಷಿಸಿದರೆ ಎಲ್ಲರೂ ಹೊರಟ್ಟಿಯವರಾಗಬಹುದು. ಅವ್ವ ನೀಡುವ ಸಂಸ್ಕಾರ ಬಹುದೊಡ್ಡದು. ಮಕ್ಕಳಲ್ಲಿ ಸಂಸ್ಕಾರ ಬೆಳೆಯಬೇಕಾದರೆ ಬಾಲ್ಯದಲ್ಲಿಯೇ ಅವ್ವನ ಪಾತ್ರ ಬಹುಮುಖ್ಯ. ಅವ್ವನ ಕೃಪೆಯಿಂದ ಶಿವಾಜಿ ಒಬ್ಬ ಮಹಾನ್ ಯೋಧನಾದ. ಹೊರಟ್ಟಿಯವರು 48 ವರ್ಷದಿಂದ ವಿಧಾನ ಪರಿಷತ್‌ನಲ್ಲಿ ಸದಸ್ಯರಾಗಿ ಹೊಸ ಇತಿಹಾಸ ಬರೆದಿದ್ದಾರೆ. ಅವ್ವ ಟ್ರಸ್ಟ್ ಮೂಲಕ ವಿಭಿನ್ನ ಕಾರ್ಯಕ್ರಮಗಳು ಜರುಗುತ್ತಿದ್ದು, ಶಶಿ ಸಾಲಿ, ಡಾ. ಬಸವರಾಜ ಧಾರವಾಡ ಅವರ ಪರಿಶ್ರಮ ಸ್ಮರಣೀಯ ಎಂದರು.

ಅವ್ವ ಸೇವಾ ಟ್ರಸ್ಟಿನ ಕಾರ್ಯದರ್ಶಿ ಶಶಿ ಸಾಲಿ ಮಾತನಾಡಿ, ಪ್ರತಿಯೊಬ್ಬರೂ ತಂದೆ-ತಾಯಿಯ ಮಹತ್ವ ಅರಿಯಬೇಕು. ಇತ್ತೀಚೆಗೆ ಹೆತ್ತ ತಂದೆ-ತಾಯಿಯನ್ನು ವೃದ್ಧಾಶ್ರಮಕ್ಕೆ ಕಳಿಸುತ್ತಿರುವವರ ಸಂಖ್ಯೆ ಹೆಚ್ಚಾಗುತ್ತಿದೆ. ಅವ್ವ ಸೇವಾ ಟ್ರಸ್ಟ್ ನೊಂದವರ ಆಸರೆಯಾಗಿದೆ. ಮೊದಲ ಸಲ ವಿಧಾನ ಪರಿಷತ್‌ಗೆ ಆಯ್ಕೆಯಾದ ಸಂದರ್ಭದಲ್ಲಿ ತಾಯಿ ಗುರವ್ವ ಅವರ ಅಪೇಕ್ಷೆಯಂತೆ ಹೊರಟ್ಟಿಯವರು ನೊಂದವರಿಗೆ, ಶಿಕ್ಷಕರಿಗೆ, ಕಾಯಕಜೀವಿಗಳಿಗೆ, ಸಮಾಜಕ್ಕೆ ಶಕ್ತಿಯಾಗಿ ನಿಂತಿದ್ದಾರೆ ಎಂದರು.

ಉಪನ್ಯಾಸಕರಾಗಿ ಆಗಮಿಸಿದ ಡಾ. ಗಿರಿಜಾ ಎಸ್.ಹಸಬಿ ಮಾತನಾಡಿ, ಅವ್ವ ಸಂಸ್ಕೃತಿಯ ಪ್ರತೀಕ, ತ್ಯಾಗದ ಸಂಕೇತ, ಒಳ್ಳೆಯ ಗುಣ ನೀಡುವ ಕೆಲಸ ಮಾಡುತ್ತಾಳೆ. ಆಕೆ ಧೀಶಕ್ತಿ, ಧೈರ್ಯ, ಪಾವಿತ್ರ್ಯತೆಯ ದ್ಯೋತಕ. ಅಂಧಕಾರವನು ಕಳೆದು, ಬೆಳಕನ್ನು ಕೊಡುವ ಕೆಲಸ ಮಾಡುತ್ತಾಳೆ. ತಾಯಿ ದೇವರಾಗಿರಬಹುದು. ದೇವರು ತಾಯಿಯಾಗಲಾಗದು. ಅವ್ವನ ನೆನಪಿಸುವ ಹಾಗೆ ಹೊರಟ್ಟಿ ಸಾಹೇಬರು ಮಾದರಿ ಕೆಲಸ ಮಾಡುತ್ತಿದ್ದಾರೆ ಎಂದರು.

ಶ್ರೀನಿವಾಸ ಕುಲಕರ್ಣಿ ಅವ್ವನ ಕುರಿತು ಹಾಡುಗಳನ್ನು ಹಾಡಿದರು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ಸಂಗೀತ ಸೇವೆ ನಡೆಸಿಕೊಟ್ಟರು. ಚಂದನ ಕೆ.ಬಳಿಗೇರ ಧರ್ಮಗ್ರಂಥ ಪಠಣ ಮಾಡಿದರೆ, ಭಾಗ್ಯಶ್ರೀ ಕೆ.ಹರ್ಲಾಪೂರ ವಚನ ಚಿಂತನ ಮಾಡಿದರು. ಅವ್ವ ಸೇವಾ ಟ್ರಸ್ಟಿನ ಗದಗ ಸಹ ಸಂಚಾಲಕ ಎಸ್. ಎಂ. ಅಂಗಡಿ ಉಪಸ್ಥಿತರಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಕಾರ್ಯದರ್ಶಿ ವೀರಣ್ಣ ಗೋಟಡಕಿ ಹಾಗೂ ಸರ್ವ ಸದಸ್ಯರು ಉಪಸ್ಥಿತರಿದ್ದರು. ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

ಅವ್ವ ಸೇವಾ ಟ್ರಸ್ಟಿನ ಗದಗ ಸಂಚಾಲಕ ಡಾ. ಬಸವರಾಜ ಧಾರವಾಡ ಮಾತನಾಡಿ, ಅವ್ವನ ಹೆಸರಿನಲ್ಲಿ ಪ್ರತಿವರ್ಷ ವಿಶೇಷ ಸಾಧಕರಿಗೆ ಪ್ರಶಸ್ತಿ ನೀಡಿ ಗೌರವಿಸುತ್ತಿದೆ. 100ಕ್ಕೂ ಅಧಿಕ ದಿವ್ಯಾಂಗರಿಗೆ ಟ್ರೈಸಿಕಲ್‌ಗಳನ್ನು ನೀಡಿದೆ. 80 ಅಂಧ ಮಕ್ಕಳಿಗೆ ಧನಸಹಾಯ ಮಾಡಿದೆ. ಧಾರವಾಡ ಜಿಲ್ಲೆಯಲ್ಲಿ 1000 ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆ ಮಾಡಿದೆ. ಬೆಳಗಾವಿ ವಿಭಾಗ ಮಟ್ಟದ 26 ಸಾವಿರ ಪ್ರೌಢಶಾಲೆಯ ಹೆಣ್ಣು ಮಕ್ಕಳಿಗೆ ಅವ್ವನ ಕುರಿತು ಪ್ರಬಂಧ ಸ್ಪರ್ಧೆ ಏರ್ಪಡಿಸಿ ಆಯ್ದ ಪ್ರಬಂಧಗಳನ್ನು 'ಅವ್ವ' ಎಂಬ ಗ್ರಂಥಗಳಲ್ಲಿ ಪ್ರಕಟಿಸಿ ಲೋಕಾರ್ಪಣೆ ಮಾಡಲಾಗಿದೆ. ಬಸವರಾಜ ಹೊರಟ್ಟಿಯವರ ಹುಟ್ಟೂರು ಯಡಹಳ್ಳಿಯಲ್ಲಿ ಸ್ವಂತ 7 ಎಕರೆ ಜಮೀನಿನಲ್ಲಿ ತಂದೆ ಶಿವಲಿಂಗಪ್ಪ ಅವರ ಹೆಸರಿನಲ್ಲಿ ಹೈಟೆಕ್ ಶಾಲೆ ನಿರ್ಮಿಸಿ ಅನೇಕ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಆಸರೆಯಾಗಿದ್ದಾರೆ ಎಂದರು.

## ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅಗಲಿಕೆಗೆ ಶ್ರೀ ರಂಭಾಪುರಿ ಜಗದ್ಗುರುಗಳ ಸಂತಾಪ



■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಪಿ.ವಿ. ನರಸಿಂಹರಾವ್ ಪ್ರಧಾನಿಯಾಗಿದ್ದ ಸಮಯದಲ್ಲಿ ಹಣಕಾಸು ಸಚಿವರಾಗಿ ಕಾರ್ಯ ನಿರ್ವಹಿಸಿದ್ದ ಮಾಜಿ ಪ್ರಧಾನ ಮಂತ್ರಿ ಮನಮೋಹನ್ ಸಿಂಗ್ ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ.

ಆರ್ಥಿಕ ತಜ್ಞರಾಗಿದ್ದ ಮನಮೋಹನ ಸಿಂಗ್ ಅವರು ದೇಶದ ಆರ್ಥಿಕ ಅಭಿವೃದ್ಧಿಗೆ ಹಾಕಿಕೊಟ್ಟ ಹಲವಾರು ಯೋಜನೆಗಳು ಯಶಸ್ವಿಯಾಗಿ ದೇಶದ ಆರ್ಥಿಕ ಸದೃಢತೆಯನ್ನು ಬೆಳೆಸಿದ್ದು, ದೇಶದ ಬಡ ಜನರ ಜೀವನ ಮಟ್ಟ ಸುಧಾರಿಸಲು ಕಾರಣವಾಗಿದ್ದನ್ನು ಮರೆಯಲಾಗದು. ಸರಳತೆ-ಸೌಜನ್ಯತೆಗೆ ಹೆಸರಾಗಿದ್ದ ಅವರು, ಎರಡು ಅವಧಿಗೆ ಪ್ರಧಾನಿಯಾಗಿ ಯಶಸ್ವಿಯಾಗಿ ಕಾರ್ಯ ನಿರ್ವಹಿಸಿದರು. ನಿಗರ್ವಿಯಾಗಿದ್ದ ಮನಮೋಹನ ಸಿಂಗ್ ಅವರ ಅಗಲಿಕೆ ನೋವಿನ ಸಂಗತಿ. ಅಗಲಿದ ಅವರ ಪವಿತ್ರ ಆತ್ಮಕ್ಕೆ ದಯಾಘನನಾದ ಪರಮಾತ್ಮನು ಚಿರಶಾಂತಿ ನೀಡಲಿ ಹಾಗೂ ಅವರ ಕುಟುಂಬದ ಸದಸ್ಯರಿಗೆ ನೋವನ್ನು ಸಹಿಸುವ ಶಕ್ತಿಯನ್ನು ನೀಡಲಿ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ತಮ್ಮ ಸಂತಾಪ ಸೂಚಕ ಸಂದೇಶದಲ್ಲಿ ತಿಳಿಸಿದ್ದಾರೆ.

## ಕಳಸಾಪೂರ ಹುಡ್ಕೋ ನಿವೇಶನ ಪಡೆದವರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ನಡೆದ ಕಳಸಾಪೂರ ಹುಡ್ಕೋ ನಿವೇಶನ ಪಡೆದವರ ಸರ್ವ ಸದಸ್ಯರ ಸಭೆಯಲ್ಲಿ ನಿರ್ಣಯಿಸಿದಂತೆ ಎಲ್ಲ ಸದಸ್ಯರಿಗೂ ಅನುಕೂಲವಾಗಲು ಡಿ.29ರಂದು ಬೆಳಿಗ್ಗೆ 10.30 ಗಂಟೆಗೆ ಸಿದ್ದಲಿಂಗ ನಗರ 1ನೇ ಕ್ರಾಸ್ ಜಾಗೃತ ಆಂಜನೇಯ ಗುಡಿಯ ಹಿಂದಿರುವ ನಗರ ಸಭೆಯ ಉದ್ಯಾನವನದಲ್ಲಿ ಸರ್ವ ಸದಸ್ಯರ ಸಭೆ ಕರೆಯಲಾಗಿದೆ.

ಈ ಸಭೆಯಲ್ಲಿ ಈವರೆಗೂ ನಡೆದುಬಂದ ದಾರಿ, ಮುಂದೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸರ್ವ ಸದಸ್ಯರ ಅಭಿಪ್ರಾಯ ಅವಶ್ಯವಿದ್ದು, ಎಲ್ಲ ಸದಸ್ಯರು, ನಿವೇಶನ ಪಡೆದ ಎಲ್ಲ ಫಲಾನುಭವಿಗಳು ಆಗಮಿಸಲು ಪ್ರಕಟಣೆ ವಿನಂತಿಸಿದೆ. ಹೆಚ್ಚಿನ ವಿವರಗಳಿಗೆ-9448905406 ಅಥವಾ 9036390839 ಸಂಪರ್ಕಿಸಲು ಡಾ. ಆರ್.ಎಚ್. ಕಬಾಡಿ ವಿನಂತಿಸಿದ್ದಾರೆ.

### ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಚನ

# ಧರ್ಮದ ಬೆಳಕಿನಿಂದ ಅಜ್ಞಾನ ದೂರ




■ವಿಜಯಸಾಕ್ಷಿ ಸುದ್ದಿ, ತುಮಕೂರು

ಆಧುನಿಕ ಕಾಲದಲ್ಲಿ ಮನುಷ್ಯ ಯಂತ್ರದಂತೆ ಕೆಲಸ ಮಾಡಿದರೂ ಬದುಕಿನಲ್ಲಿ ಶಾಂತಿ, ನೆಮ್ಮದಿಯಿಲ್ಲ. ಬಾಳಿನ ಭಾಗ್ಯೋದಯಕ್ಕೆ ಆಧ್ಯಾತ್ಮಿಕ ಚಿಂತನಗಳು ಅವಶ್ಯಕ. ಧರ್ಮ ದೀಪದ ಬೆಳಕಿನಿಂದ ಮನುಷ್ಯನ ಅಜ್ಞಾನ ದೂರವಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಶ್ರೀ ವಿಶಾಲಾಕ್ಷಮ್ಮ ಸದಾಶಿವಯ್ಯ ಸಭಾಭವನದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟ್‌ನ ಆಶ್ರಯದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಧನುರ್ಮಾಸದ ಇಷ್ಟಲಿಂಗ ಮಹಾಪೂಜಾ ಅಂಗವಾಗಿ ಜರುಗಿದ 2ನೇ ದಿನದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಜೀವನದಲ್ಲಿ ಧರ್ಮ, ಅರ್ಥ, ಕಾಮ, ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳದಿದ್ದರೆ ಜೀವನ ನಿರರ್ಥಕ. ಭೌತಿಕ ಸಂಪನ್ಮೂಲಗಳಾಗಲಿ ಸಿರಿ ಸಂಪತ್ತಿನ ಸಂಗ್ರಹಗಳಾಗಲಿ ಮನುಷ್ಯನಿಗೆ ಸಂತೃಪ್ತಿ ತಂದು ಕೊಡಲಾರವು. ಅದರೊಂದಿಗೆ ಒಂದಿಷ್ಟಾದರೂ ಆಧ್ಯಾತ್ಮಿಕ ತಿಳುವಳಿಕೆ ಮುಖ್ಯ. ಯಾವ ಸಂಪತ್ತಿಗಾಗಿ ಈ ಜೀವ ಜಗತ್ತು ಬದುಕುತ್ತಿದೆಯೋ ಆ ಸಂಪತ್ತಿನ ಪ್ರಾಪ್ತಿಗಾಗಿ ಶ್ರಮಿಸಬೇಕಾಗುತ್ತದೆ. ಮಲಿನಗೊಂಡ ಮನಸ್ಸಿಗೆ ಶಿವಜ್ಞಾನದ ಅರಿವು ಮೂಡಿಸಿ ಜಾಗೃತಗೊಳಿಸುವ ಶಕ್ತಿ ಶ್ರೀ ಗುರುವಿಗೆ ಇದೆ. ಹೃದಯ ಹೃದ್ಭೂಮಿಯನ್ನು ಕೃಷಿಗೈದು ಸಂಸ್ಕಾರ, ಸಚ್ಚಾರಿತ್ರ್ಯದಿಂದ ಬದುಕನ್ನು ಶ್ರೀಮಂತಗೊಳಿಸುವ ಅದ್ಭುತ ಶಕ್ತಿ ಗುರುವಿನಲ್ಲಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಗ್ರಂಥದಲ್ಲಿ ಗುರು ಹಿರಿಮೆಯನ್ನು ಕೊಂಡಾಡಿದ್ದಾರೆ ಎಂದರು.

ತಿಪಟೂರು ಷಡಕ್ಷರಿ ಮಠದ ರುದ್ರಮುನಿ ಸ್ವಾಮಿಗಳು ಮಾತನಾಡಿ, ವ್ಯಕ್ತಿತ್ವ ವಿಕಾಸಕ್ಕೆ ಧರ್ಮ-ಆಧ್ಯಾತ್ಮಗಳ ಕೊಡುಗೆ ಅಪಾರ. ಭೌತಿಕ ಸಂಪತ್ತು ಶಾಶ್ವತವಲ್ಲ. ಆಧ್ಯಾತ್ಮದ ಸಂಪತ್ತೇ ನಿಜವಾದ ಸಂಪತ್ತು. ಶ್ರೀ ಜಗದ್ಗುರು ರೇಣುಕಾಚಾರ್ಯರ ಮತ್ತು ಬಸವಾದಿ ಶಿವಶರಣರ ವಿಚಾರ ಧಾರೆಗಳು ಬದುಕಿ ಬಾಳುವ ಜನಾಂಗಕ್ಕೆ ಆಶಾಕಿರಣವೆಂದರು.

ಸಮಾರಂಭದ ನೇತೃತ್ವ ವಹಿಸಿದ ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕವಾಗಿ ಮಾತನಾಡಿ, ಮಾನವೀಯ ಸಂಬಂಧಗಳು ಶಿಥಿಲಗೊಳ್ಳುತ್ತಿರುವ ಇಂದಿನ ಸಂದರ್ಭದಲ್ಲಿ ಇಂಥ ಧಾರ್ಮಿಕ ಸಮಾರಂಭಗಳು ಅವಶ್ಯಕ. ಶ್ರೀ ರಂಭಾಪುರಿ ಜಗದ್ಗುರುಗಳ ಧರ್ಮ ಜಾಗೃತಿ ಅಭಿಯಾನ ನಿರಂತರ ಜರುಗುತ್ತಿರುವುದು ಭಕ್ತರ ಸೌಭಾಗ್ಯವೆಂದರು. ಬಿಳಿಕಿ ರಾಚೋಟೇಶ್ವರ ಶ್ರೀಗಳು, ಬೀರೂರು ರುದ್ರಮುನಿ ಶ್ರೀಗಳು, ಮಾದಿಹಳ್ಳಿ ಚನ್ನಮಲ್ಲಿಕಾರ್ಜುನ ಶ್ರೀಗಳು ಉಪಸ್ಥಿತರಿದ್ದರು.

ಶಾಸಕ ಜಿ.ಬಿ. ಜ್ಯೋತಿಗಣೇಶ, ಅಂಬಿಕಾ ಹುಲಿನಾಯ್ಕರ್, ಟಿ.ಸಿ. ಓಹಿಲೇಶ್ವರ, ಶಶಿ ಹುಲಿಕುಂಟೆಮಠ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಎನ್.ಆರ್. ವಿಶ್ವಾರಾಧ್ಯರು, ಸಿ.ಎಸ್. ಬಸವರಾಜಯ್ಯ, ಹೆಚ್.ಎನ್. ಚಂದ್ರಶೇಖರ, ಡಿ.ಜಗದೀಶ, ಕೆ.ಎಸ್. ದರ್ಶನ ಮೊದಲಾದ ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು.

ಕಾರ್ಯದರ್ಶಿ ಹೆಚ್.ಎಸ್. ಭಸ್ಮಾಗಿ ರುದ್ರಯ್ಯನವರು ಸ್ವಾಗತಿಸಿದರು. ಎಸ್. ಓಂಕಾರಸ್ವಾಮಿ ನಿರೂಪಿಸಿದರು.

> ಸಾಹಿತ್ಯ ಸಂಶೋಧಕರಾದ ಡಾ. ಎ.ಎಸ್. ವಾಲಿ ಮಾತನಾಡಿ, ಶಿವಜ್ಞಾನದ ಅಕ್ಷಯ ಸಿದ್ಧಿಯಾದ ಶ್ರೀ ಗುರುವನ್ನು ಎಷ್ಟು ಕೊಂಡಾಡಿದರೂ ಕಡಿಮೆ. ಪರಶಿವನ ಸಾಕಾರ ರೂಪ ಗುರುವೆಂದು ವೀರಶೈವ ಧರ್ಮ ಹೇಳುತ್ತದೆ. ಶಿವ ಪಥವನರಿಯಲು ಗುರು ಪಥವೇ ಮೊದಲು ಎಂದು ಭಕ್ತಿ ಭಂಡಾರಿ ಬಸವಣ್ಣನವರು ಹೇಳಿದ್ದುಂಟು. ನಂಬಿದವರ ಬಾಳಿನಲ್ಲಿ ಶ್ರೀ ಗುರು ಅದ್ಭುತ ಶಕ್ತಿ ತುಂಬಿ ಉಜ್ವಲ ಬಾಳಿಗೆ ಬಲವನ್ನು ದೊರಕಿಸಿಕೊಡುವಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರಾಗಲಿ ಶ್ರೀ ಜಗದ್ಗುರು ರೇವಣಸಿದ್ಧೇಶ್ವರರಾಗಲಿ ಧಾರ್ಮಿಕ ಕ್ರಾಂತಿಯ ಜೊತೆಗೆ ಸಾಮಾಜಿಕ ಸತ್ಕ್ರಾಂತಿಗೈದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.

## ಶಿಗ್ಲಿಯಲ್ಲಿ ಸಂತಾಪ ಸಭೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗುರುವಾರ ರಾತ್ರಿ ನಿಧನರಾದ ಮಾಜಿ ಪ್ರಧಾನಿ, ಶ್ರೇಷ್ಠ ಆರ್ಥಿಕ ತಜ್ಞ, ಡಾ.ಮನಮೋಹನ್‌ಸಿಂಗ್ ಅವರ ನಿಧನಕ್ಕೆ ಶುಕ್ರವಾರ ಬೆಳಿಗ್ಗೆ ಶಿಗ್ಲಿ ಗ್ರಾಮದ ಮುಖಂಡರು, ಗುರು ಹಿರಿಯರು ಹಳೆ ಬಸ್ ನಿಲ್ದಾಣದ ಆವರಣದಲ್ಲಿ ಸಂತಾಪ ಸೂಚಕ ಸಭೆಯನ್ನು ನೆರವೇರಿಸಿದರು.

ಮಾಜಿ ಶಾಸಕ ರಾಮಣ್ಣ ಲಮಾಣಿ, ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ಗ್ರಾ.ಪಂ ಮಾಜಿ ಅಧ್ಯಕ್ಷ ರಾಮಣ್ಣ ಲಮಾಣಿ(ಶಿಗ್ಲಿ), ಮುಖಂಡರಾದ ಸೋಮಣ್ಣ ಡಾನಗಲ್ಲ, ಅಶೋಕ ಶಿರಹಟ್ಟಿ, ಸಿದ್ದು ಪೂಜಾರ, ರಾಜು ಓಲೇಕಾರ, ಮಂಜು ಶಂಭೋಜಿ ಮುಂತಾದವರು ಅಗಲಿದ ಡಾ.ಸಿಂಗ್ ಅವರಿಗೆ ನುಡಿ ನಮನ ಸಲ್ಲಿಸಿದರು.

ಮುಖಂಡ ಯಲ್ಲಪ್ಪ ತಳವಾರ, ರಾಮಣ್ಣ ಕಲಕೋಟಿ, ಸಂತೋಷ ತಾಂದಳೆ, ರಮೇಶ ಬಾರ್ಕಿ, ಕಲ್ಲನಗೌಡ್ರ, ರಾಜು ನದಾಫ್, ಈರಣ್ಣ ಅಕ್ಕೂರ, ದೇವಣ್ಣ ವಾಲಿಕಾರ, ಮಂಜು ಗೊಂದಕರ, ಈಸಣ್ಣ ಹುಲಗೂರ, ಗಂಗಾಧರಯ್ಯ ಘಂಟಾಮಠ, ರಾಮಣ್ಣ ಗೋಣೆಪ್ಪನವರ, ಎಚ್.ಎಫ್. ತಳವಾರ, ಬಾಬಣ್ಣ ಸುಂಕದ, ಬಸಣ್ಣ ಹಂಜಿ ಇತರರು ಹಾಜರಿದ್ದರು.

### ಶ್ರೀ ಗವಿಸಿದ್ಧೇಶ್ವರ ಜಾತ್ರಾಮಹೋತ್ಸವ-2025ರ ಅಂಗವಾಗಿ ಜಾಗೃತಿ ಜಾಥಾ

## ಜಿಲ್ಲಾ ಮಟ್ಟದ ಭಾಷಣ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಸಂಸ್ಥಾನ ಶ್ರೀ ಗವಿಮಠದ ಜಾತ್ರಾ ಮಹೋತ್ಸವವೆಂದರೆ, ವಿನೂತನ ವಿಶೇಷತೆಯ, ಹೊಸತನದ ಸಂಗಮ. ಈ ವರ್ಷವೂ ಸಹ ವಿನೂತನವಾದ ಜಾಗೃತಿ ಮೂಡಿಸಲು ಶ್ರೀಮಠವು ಹೊಸ ಸಂಕಲ್ಪದೊಂದಿಗೆ ಸಿದ್ಧವಾಗಿದೆ.

ಪ್ರಸ್ತುತ ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವ 2025ರ ಸಾಮಾಜಿಕ ಜಾಗೃತಿ ವಿಷಯವಾಗಿ 'ಸಕಲಚೇತನ' ಎಂಬ ಶೀರ್ಷಿಕೆಯ ಅಡಿಯಲ್ಲಿ 'ವಿಕಲಚೇತನರ ನಡೆ ಸಕಲಚೇತನದ ಕಡೆ' ಎಂಬ ಘೋಷ ವಾಕ್ಯದೊಂದಿಗೆ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ. ಜ.11ರ ಬೆಳಿಗ್ಗೆ 8 ಗಂಟೆಗೆ ಕೊಪ್ಪಳದ ಬಾಲಕಿಯರ ಸರಕಾರಿ ಕಾಲೇಜಿನ ಮೈದಾನ (ತಾಲೂಕು ಕ್ರೀಡಾಂಗಣ)ದಿಂದ ಆರಂಭವಾಗಿ ಅಶೋಕ ವೃತ್ತ, ಜವಾಹರ ರಸ್ತೆ, ಗಡಿಯಾರ ಕಂಬದ ಮೂಲಕ ಶ್ರೀಗವಿಮಠದ ಜಾತ್ರಾ ಮಹಾದಾಸೋಹಕ್ಕೆ ತಲುಪಿ ಸಮಾರೋಪ ಸಮಾರಂಭದೊಂದಿಗೆ ಮುಕ್ತಾಯ ವಾಗಲಿದೆ.

ಈ ಸತ್ಕಾರ್ಯಕ್ಕೆ ಭಕ್ತರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಾರ್ವಜನಿಕ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ, ಆರೋಗ್ಯ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಹಾಗೂ ಸ್ಥಳೀಯ ಶಿಕ್ಷಣ ಸಂಸ್ಥೆಗಳ ಸಹಕಾರ ಪ್ರೋತ್ಸಾಹದೊಂದಿಗೆ ಆಯೋಜಿಸಲಾಗುತ್ತದೆ.

ಸದರಿ ಅಭಿಯಾನದ ಅಂಗವಾಗಿ ಜ.2ರಂದು ಸ್ಥಳಿಯ ಶಾಲಾ, ಕಾಲೇಜು ಮಟ್ಟದಲ್ಲಿ ಪ್ರೌಢಶಾಲೆ, ಪದವಿಪೂರ್ವ ಹಾಗೂ ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ 'ವಿಕಲಚೇತನರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಮಾಜದ ಸ್ಪಂದನೆ' ಎಂಬ ವಿಷಯದ ಭಾಷಣ ಸ್ಪರ್ಧೆಯನ್ನು ಆಯೋಜಿಸಲು ತಿಳಿಸಲಾಗಿದೆ.

ಸ್ಥಳೀಯ ಶಾಲಾ, ಕಾಲೇಜು ಮಟ್ಟದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಸದರಿ ವಿಷಯದ ಮೇಲೆ ಜಿಲ್ಲಾ ಮಟ್ಟದ ಸ್ಪರ್ಧೆಯನ್ನು ಜ. 4ರಂದು ಶ್ರೀ ಗವಿಸಿದ್ಧೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದೆ. ಈ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಜಾಗೃತಿ ಜಾಥಾ ನಡಿಗೆಯ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಗೌರವಿಸ ಲಾಗುವುದು. ಹೆಚ್ಚಿನ ಮಾಹಿತಿಗಾಗಿ-9742307153, 9986591076 ಸಂಪರ್ಕಿಸಲು ಗವಿಮಠ ಪ್ರಕಟಣೆಯಲ್ಲಿ ತಿಳಿಸಿದೆ.

## ಡಾ. ಸಿಂಗ್ ಭವ್ಯ ಭಾರತದ ನಿರ್ಮಾತೃ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರು ವಿಧಿವಶರಾದ ಸುದ್ದಿ ತೀವ್ರ ನೋವುಂಟು ಮಾಡಿದೆ. ಕೇಂದ್ರ ಹಣಕಾಸು ಸಚಿವರಾಗಿ, ಆರ್‌ಬಿಐ ಗವರ್ನರ್ ಆಗಿ, ಆರ್ಥಿಕ ಸಲಹೆಗಾರರಾಗಿ, ರಾಜ್ಯಸಭೆಯ ಪ್ರತಿಪಕ್ಷ ನಾಯಕರಾಗಿ ಅನೇಕ ಹುದ್ದೆಗಳಲ್ಲಿ ರಾಷ್ಟ್ರಸೇವೆ ಸಲ್ಲಿಸಿದ ಭವ್ಯ ಭಾರತದ ನಿರ್ಮಾತೃ



ಡಾ. ಮನಮೋಹನ ಸಿಂಗ್ ಅವರ ನಿಧನದಿಂದ ದೇಶ ಒಬ್ಬ ಮುತ್ಸದ್ದಿ ನಾಯಕನನ್ನು ಕಳೆದುಕೊಂಡಂತಾಗಿದೆ ಎಂದು ಮೈಸೂರು ಜಪದಕಟ್ಟೆ ಅರಮನೆಯ ಹಾಗೂ ಬನ್ನಿಕೊಪ್ಪ ಬೃಹನ್ಮಠದ ಷ.ಬ್ರ.ಡಾ. ಶ್ರೀ ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ಶೋಕ ವ್ಯಕ್ತಪಡಿಸಿದ್ದಾರೆ.

ಅವರ ಆತ್ಮಕ್ಕೆ ಚಿರಶಾಂತಿ ಸಿಗಲಿ, ಅವರ ಕುಟುಂಬಸ್ಥರಿಗೆ ಈ ನೋವನ್ನು ಭರಿಸುವ ಶಕ್ತಿ ನೀಡಲೆಂದು ದೇವರಲ್ಲಿ ಪ್ರಾರ್ಥಿಸುತ್ತೇವೆ ಎಂದು ಅವರು ತಿಳಿಸಿದ್ದಾರೆ.

# ಡಾ. ಮನಮೋಹನ್ ಸಿಂಗ್‌ರಿಗೆ ಶ್ರದ್ಧಾಂಜಲಿ

■ವಿಜಯಸಾಕ್ಷಿ ಸುದ್ದಿ, ಗದಗ




ಗುರುವಾರ ನಿಧನರಾದ ಮಾಜಿ ಪ್ರಧಾನಮಂತ್ರಿ ಡಾ. ಮನಮೋಹನ್ ಸಿಂಗ್‌ರಿಗೆ ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಘಟಕದ ವತಿಯಿಂದ ಮುಳುಗುಂದ ನಾಕಾ ವೃತ್ತದಲ್ಲಿ ಭಾವಪೂರ್ಣ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ಗೌರವ ಜಿಲ್ಲಾಧ್ಯಕ್ಷ ನಿಂಗನಗೌಡ ಎಸ್. ಮಾಲಿಪಾಟೀಲ, ಭಾರತದಲ್ಲಿ ಖಾಸಗೀಕರಣದ ಹೆಬ್ಬಾಗಿಲನ್ನು ತೆರೆದು ಬಹುರಾಷ್ಟ್ರೀಯ ಕಂಪನಿಗಳ ಮೂಲಕ ಉದ್ಯೋಗ ಸೃಷ್ಟಿ ಮಾಡಿ ಭಾರತೀಯರ ಆರ್ಥಿಕ ಸ್ಥಿತಿಯನ್ನು ಕೆಳವರ್ಗದಿಂದ ಮಧ್ಯಮ, ಮೇಲ್ಮಧ್ಯಮ ವರ್ಗಕ್ಕೆ ಕೊಂಡೊಯ್ಯುವಲ್ಲಿ ಬಹುಮುಖ್ಯ ಪಾತ್ರ ವಹಿಸಿದ ಮನಮೋಹನ ಸಿಂಗ್ ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸಿದರು.

ಇದೇ ಸಂದರ್ಭದಲ್ಲಿ ಕರವೇ ಜಿಲ್ಲಾ ಉಪಾಧ್ಯಕ್ಷ ಮಾರುತಿ ಈಳಿಗೆರೆ, ವಿನಾಯಕ್ ಬದಿ, ಜಿಲ್ಲಾ ಕಾರ್ಯದರ್ಶಿ ಕುಮಾರ್ ರೇವಣ್ಣವರ್, ತಾಲೂಕ್ ಉಪಾಧ್ಯಕ್ಷ ದಾವಲ್‌ಸಾಬ್ ತಹಸೀಲ್ದಾರ್, ರವಿ ಮಲ್ನಾಡ್, ಗೋವಿಂದ ಬಿಂಕದಕಟ್ಟಿ, ಆನಂದ್ ವಾಲ್ಮೀಕಿ, ಗಂಗಾಧರ ಕಾಡಪ್ಪನವರ್, ತಿರುಮಲ ಬಿಂಕದಕಟ್ಟಿ, ಷಣ್ಮುಗ, ಮೈಲಾರಪ್ಪ ಮಲ್ಲಾಡದ ಮುಂತಾದವರಿದ್ದರು.

## ತೂಗು ಪಂಚಾಂಗ ಬಿಡುಗಡೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕೆಪಿಟಿಸಿಎಲ್ ಮತ್ತು ಹೆಸ್ಕಾಂ ವೀರಶೈವ ಲಿಂಗಾಯತ ನೌಕರರ ಸಂಘದ ವತಿಯಿಂದ ಡಿ.28ರಂದು ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾಧಿಕಾರಿ ಕಚೇರಿ ಎದುರಿಗೆ ಇರುವ ಭಾರತರತ್ನ ಪಂ. ಭಿಮಸೇನ ಜೋಶಿ ರಂಗ ಮಂದಿರದಲ್ಲಿ 2025ನೇ ಸಾಲಿನ ತೂಗು ಪಂಚಾಂಗ (ಕ್ಯಾಲೆಂಡರ್) ಬಿಡುಗಡೆ ಸಮಾರಂಭ ಜರುಗಲಿದೆ.

ಕಾರ್ಯಕ್ರಮ ದಿವ್ಯ ಸಾನ್ನಿಧ್ಯವನ್ನು ಅಡ್ನೂರ-ರಾಜೂರು-ಗದಗ ಬ್ರಹನ್ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಶ್ರೀಗಳು ವಹಿಸುವರು. ವಿಶೇಷ ಆಹ್ವಾನಿತರಾಗಿ ಹೆಸ್ಕಾಂನ ವ್ಯವಸ್ಥಾಪಕ ನಿರ್ದೇಶಕಿ ವೈಶಾಲಿ ಎಂ.ಎಲ್., ಹೆಸ್ಕಾಂನ ಕಾರ್ಯನಿರ್ವಾಹಕ ಅಭಿಯಂತರ ಹಾಗೂ ಕೆಪಿಟಿಸಿಎಲ್ ವೀರಶೈವ ಲಿಂಗಾಯತ ನೌಕರರ ಸಂಘದ ಜಿಲ್ಲಾಧ್ಯಕ್ಷ ರಾಜೇಶ ಕಲ್ಯಾಣಶೆಟ್ಟರ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ. ಶಂಬು ಬಳಿಗೇರ, ಹುಬ್ಬಳ್ಳಿಯ ಎಸ್.ಜಗದೀಶ, ಪ್ರಕಾಶ ಪಾಟೀಲ, ಮೈಸೂರಿನ ಶರಣಮ್ಮ ಜಂಗಿನ, ಹುಬ್ಬಳ್ಳಿಯ ಆರ್. ಎನ್. ಸಬರದ, ಹುಬ್ಬಳ್ಳಿಯ ವೀರೇಶಕುಮಾರ ಹೆಬ್ಬಾಳ, ಕೆ.ವಿ. ಪಾಗಿ, ಗದುಗಿನ ಶಿಲ್ಪಾ ಎಂ., ವಿ.ಬಿ. ರಾಜೂರ, ಬಿ.ಎಸ್. ಜವಳಿ, ರೋಣದ ಎನ್.ಎಫ್. ಅಸೂಟಿ, ಪ್ರಭುಸ್ವಾಮಿ ದಂಡಾವತಿಮಠ, ರವಿ ಗುಡಿಮನಿ, ನವೀನ ಕುಲಕರ್ಣಿ, ಬ್ರಿಜೇಶ ಕಲ್ಯಾಣಶೆಟ್ಟರ, ಮಹೇಶ ನಾಗರಹಳ್ಳಿ ಭಾಗವಹಿಸುವರು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಕ್ರೀಡಾಕೂಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ವಿಜಯಪುರ

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಖೋ-ಖೋ ಕ್ರೀಡಾಪಟುಗಳು 2024-25ನೇ ಸಾಲಿನ ದಕ್ಷಿಣ ಭಾರತ ಅಂತರ ವಿಶ್ವವಿದ್ಯಾಲಯದ ಕ್ರೀಡೆಗೆ ಆಯ್ಕೆಯಾಗಿದ್ದು, ಡಿ. 28ರಿಂದ 31ರವರೆಗೆ ಕ್ಯಾಲಿಕಟ್ ವಿಶ್ವವಿದ್ಯಾನಿಲಯದಲ್ಲಿ ಕ್ರೀಡೆ ಜರುಗಲಿದೆ. ಸದರಿ ಕ್ರೀಡಾಕೂಟದಲ್ಲಿ ಮಹಿಳಾ ವಿವಿಯ ಖೋ-ಖೋ ಕ್ರೀಡಾಪಟುಗಳು, ತಂಡದ ತರಬೇತುದಾರಾಗಿ ಮಂಜಪ್ಪ ಸಿ.ಎಸ್ ಮತ್ತು ವ್ಯವಸ್ಥಾಪಕರಾಗಿ ಮಹಾಂತೇಶ ಎಲ್ ಭಾಗವಹಿಸಲಿದ್ದಾರೆ.

ಆಯ್ಕೆಯಾಗಿರುವ ಕ್ರೀಡಾಪಟುಗಳ ತಂಡಕ್ಕೆ ವಿವಿಯ ಕುಲಪತಿ ಪ್ರೊ. ಬಿ.ಕೆ. ತುಳಸಿಮಾಲ, ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ. ಎಚ್.ಎಂ. ಚಂದ್ರಶೇಖರ, ಕ್ರೀಡಾ ನಿರ್ದೇಶನಾಲಯದ ನಿರ್ದೇಶಕ ಡಾ. ಹನುಮಂತಯ್ಯ ಪೂಜಾರ, ಸಹ ನಿರ್ದೇಶಕ ವಿಶ್ವನಾಥ ನಡಕಟ್ಟಿ ಮತ್ತು ಕ್ರೀಡಾ ವಿಭಾಗದ ಮುಖ್ಯಸ್ಥ ಪ್ರೊ. ಸಕ್ಪಾಲ್ ಹೂವಣ್ಣ ಶುಭ ಹಾರೈಸಿದ್ದಾರೆ.

# ಡಾ. ಸಿಂಗ್ ಅಭಿವೃದ್ಧಿಯ ನೇತಾರ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



10 ವರ್ಷಗಳ ಕಾಲ ಪ್ರಧಾನಿಯಾಗಿ ಡಾ. ಮನಮೋಹನ್ ಸಿಂಗ್ ಅವರು ದೀನ ದಲಿತರ, ರೈತರ ಹಾಗೂ ಸರ್ವ ಸಮುದಾಯಗಳ ಏಳಿಗೆಗಾಗಿ ಹಲವು ಜನಪ್ರಿಯ ಯೋಜನೆಗಳನ್ನು ಜಾರಿಗೊಳಿಸಿದ್ದರು ಎಂದು ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿಯ ಶ್ರೀ ಬಸವೇಶ್ವರ ವೃತ್ತದಲ್ಲಿ ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಆಯೋಜಿಸಿದ್ದ ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸಿ, ಅವುಗಳನ್ನು ಅನುಷ್ಠಾನಕ್ಕೆ ತಂದು ದೇಶವು ಅಭಿವೃದ್ಧಿ ಪಥದತ್ತ ಸಾಗುವಂತೆ ದೃಷ್ಟಿ ಹರಿಸಿದ್ದರು. ಇಂತಹ ಮಹಾನ್ ಚೇತನವನ್ನು ಕಳೆದುಕೊಂಡು ಕಾಂಗ್ರೆಸ್ ಪಕ್ಷ ಬಡವಾಗಿದೆ. ಇಂತಹ ಮಹಾನ್ ಚೇತನ ಮತ್ತೆ ಹುಟ್ಟಿ ಬರಲಿ ಎಂದು ಹೇಳಿದರು.

ಡಿಕೆ ಶಿವಕುಮಾರ ಅಭಿಮಾನಿ ಬಳಗದ ಜಿಲ್ಲಾ ಕಾರ್ಯಾಧ್ಯಕ್ಷ ಮಹಾಂತೇಶ ದಶಮನಿ, ಅಜ್ಜು ಪಾಟೀಲ, ಹೊನ್ನಪ್ಪ ಶಿರಹಟ್ಟಿ, ದೇವಪ್ಪ ಲಮಾಣಿ, ಇಸಾಕ ಆದ್ರಳ್ಳಿ, ರವಿ ಗುಡಿಮನಿ, ಮುಸ್ತಾಕ ಚೋರಗಸ್ತಿ, ಬುಡನಶ್ಯಾ ಮಕಾನದಾರ, ಮಾಬುಸಾಬ ಲಕ್ಷ್ಮೇಶ್ವರ, ಸುಧೀರ ಜಮಖಂಡಿ, ಆನಂದ ಕೋಳಿ, ಈರಣ್ಣ ಕೋಟಿ, ನಾಗರಾಜ ಡಂಬಳ, ಆಯುಬ್ ಮನಿಯಾರ ಮುಂತಾದವರು ಉಪಸ್ಥಿತರಿದ್ದರು.

### ಅಗಲಿದ ಅರ್ಥಶಾಸ್ತ್ರಜ್ಞ ಡಾ. ಮನಮೋಹನ್ ಸಿಂಗ್‌ರಿಗೆ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಶ್ರದ್ಧಾಂಜಲಿ

# ರಾಜಕಾರಣ ಬದಿಗಿಟ್ಟು ಸೇವೆ ಸಲ್ಲಿಸಿದ ಡಾ. ಸಿಂಗ್

■ವಿಜಯಸಾಕ್ಷಿ ಸುದ್ದಿ, ಗದಗ

ಖ್ಯಾತ ಅರ್ಥಶಾಸ್ತ್ರಜ್ಞ ಎಂದೇ ಖ್ಯಾತರಾಗಿದ್ದ ಮಾಜಿ ಪ್ರಧಾನಮಂತ್ರಿ ಡಾ. ಮನಮೋಹನ ಸಿಂಗ್ ಅವರು ಡಿಸೆಂಬರ್ 26, ಗುರುವಾರ ರಾತ್ರಿ ಇಹಲೋಕ ತ್ಯಜಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಅಗಲಿದ ಹಿರಿಯರಿಗೆ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಶ್ರದ್ಧಾಂಜಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ವೇಳೆ ಮನಮೋಹನ್ ಸಿಂಗ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಅರ್ಪಿಸಿ, ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ್, ಪ್ರಧಾನಮಂತ್ರಿ ಹುದ್ದೆಯನ್ನು ಪ್ರತಿಯೊಬ್ಬರೂ ನಾಯಕತ್ವದ ಸ್ಥಾನ, ರಾಜಕೀಯದ ಅತೀ ದೊಡ್ಡ ಸ್ಥಾನ ಎಂದೇಭಾವಿಸುತ್ತಾರೆ. ಆದರೆ, ಮನಮೋಹನ್ ಸಿಂಗ್ ಅವರು ಅದೊಂದು ಸರ್ಕಾರಿ ನೌಕರಿ ಎಂದು ಭಾವಿಸಿ ಸಮರ್ಪಕ ಆಡಳಿತ ನಡೆಸಿದ್ದರು. ರಾಜಕಾರಣ ಬದಿಗಿಟ್ಟು ಅವರು ದೇಶಕ್ಕಾಗಿ ಸೇವೆ ಸಲ್ಲಿಸಿದ್ದರು. ಅಂದಿನ ರಾಜಕೀಯದಲ್ಲಿ ಮನಮೋಹನ್ ಸಿಂಗ್ ಬಗ್ಗೆ ವಿರೋಧ ಪಕ್ಷದವರು ಹಲವಾರು ಟೀಕೆಗಳನ್ನು ಮಾಡಿದರೂ ಯಾವುದಕ್ಕೂ ತಲೆ ಕೆಡಿಸಿಕೊಳ್ಳದೇ ದೇಶದ ಕಾಯಕದಲ್ಲಿ ತೊಡಗಿದ್ದರು ಎಂದರು.



ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ನೀಲಮ್ಮ ಬೋಳನವರ ಮಾತನಾಡಿ, ಆರ್ಥಿಕ ತಜ್ಞರಾಗಿದ್ದ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರು ರೈತರ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದರು. ಅವರ ಸಾಧನೆ ಇಂದಿಗೂ ಅಜರಾಮರವಾಗಿದೆ. ಅವರ ಸ್ಥಾನವನ್ನು ತುಂಬಲು ಯಾರಿಂದಲೂ ಸಾಧ್ಯವಿಲ್ಲ. ಆರ್ಥಿಕ ತಜ್ಞರನ್ನು ಕಾಂಗ್ರೆಸ್ ಪಕ್ಷ ಪ್ರಧಾನಿಯನ್ನಾಗಿ ಮಾಡಿತ್ತು. 10 ವರ್ಷದ ಅವರ ಆಡಳಿತದಲ್ಲಿ ಭಾರತ ಉತ್ಕೃನ್ನತ ಸ್ಥಾನದಲ್ಲಿ ಏರಿಕೆ ಕಂಡಿತ್ತು. ಅವರ ಅಗಲಿಕೆ ಇಡೀ ಜಗತ್ತಿಗೆ ದೊಡ್ಡ ನಷ್ಟವಾಗಿದೆ ಎಂದರು.

ಜಿಲ್ಲಾ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ಅಶೋಕ ಮಂದಾಲಿ ಮಾತನಾಡಿ, ದೇಶ ಕಂಡ ಅತ್ಯಂತ ಮುಗ್ಧ ಮನಸ್ಸಿನ ರಾಜಕಾರಣಿಗಳಲ್ಲಿ ಮನಮೋಹನ್ ಸಿಂಗ್ ಪ್ರಮುಖರಾಗಿದ್ದು, ರೈತರ ಬಗ್ಗೆ ಅಪಾರ ಕಾಳಜಿಯನ್ನು ಹೊಂದಿದ್ದರು. 72 ಸಾವಿರ ಕೋಟಿ ರೂ ರೈತರ ಸಾಲ ಮನ್ನಾ ಮಾಡುವ ಮೂಲಕ ರೈತರ ಬೆನ್ನೆಲುಬಾಗಿ ನಿಂತಿದ್ದರು. ದೇಶದಲ್ಲಿ ಆಧಾರ್ ಕಾರ್ಡ್ ವ್ಯವಸ್ಥೆಯನ್ನು ಜಾರಿಗೆ ತಂದ ಕೀರ್ತಿ ಮನಮೋಹನ್ ಸಿಂಗ್‌ಗೆ ಸಲ್ಲುತ್ತದೆ. ಅವರ ಅಗಲಿಕೆಯು ದೇಶಕ್ಕೆ ತುಂಬಲಾರದ ನಷ್ಟವಾಗಿದೆ ಎಂದರು.

ಕಾಂಗ್ರೆಸ್ ಹಿರಿಯ ಮುಖಂಡ ಎಸ್. ಎನ್. ಬಳ್ಳಾರಿ ಮಾತನಾಡಿ, ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ವೃತ್ತಿಪರ ರಾಜ-ಕಾರಣಿ ಆಗಿರಲಿಲ್ಲ. ಅವರೊಬ್ಬ ಆರ್ಥಿಕ ತಜ್ಞರಾಗಿದ್ದರು. ಆದರೆ, ಅನಿವಾರ್ಯವಾಗಿ ಅವರು ರಾಜಕಾರಣಕ್ಕೆ ಬಂದು ನಾಲ್ಕು ದಶಕದ ಹಿಂದೆ ದೇಶದ ಆರ್ಥಿಕತೆಯನ್ನು ಬದಲಾಯಿಸಿದರು. ದೇಶದ ಅಭಿವೃದ್ಧಿಯ ಶ್ರೇಯಸ್ಸು ಮನಮೋಹನ್ ಸಿಂಗ್ ಅವರಿಗೆ ಸಲ್ಲುತ್ತದೆ. ಅವರ ಅಗಲಿಕೆ ದೇಶಕ್ಕೆ ತುಂಬಲಾರದ ನಷ್ಟವಾಗಿದ್ದು, ದೇವರು ಅವರ ಕುಟುಂಬಕ್ಕೆ ದುಃಖ ಸಹಿಸುವ ಶಕ್ತಿ ನೀಡಲಿ ಎಂದು ಸಂತಾಪ ಸೂಚಿಸಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಕಮಿಟಿ ಅಧ್ಯಕ್ಷ ಬಸವರಾಜ ಅಸೂಟಿ, ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಉಮರ್ ಫಾರೂಕ್ ಹುಬ್ಬಳ್ಳಿ, ಮಹಮ್ಮದ್ ಶಾಲಗಾರ, ಮುಖಂಡರಾದ ಶ್ರೀನಿವಾಸ ಹುಯಿಲಗೋಳ, ವಿನೋದ ಶಿದ್ಲಿಂಗ್, ಮೋಹನ್ ದೊಡಕುಂಡಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು, ವಿವಿಧ ಘಟಕಗಳ ಅಧ್ಯಕ್ಷರು ಉಪಸ್ಥಿತರಿದ್ದರು.

ಮನಮೋಹನ್ ಸಿಂಗ್ ವಿದೇಶ ಪ್ರವಾಸ ಮುಗಿಸಿ ಬರುತ್ತಿದ್ದಂತೆ ಪತ್ರಿಕಾಗೋಷ್ಠಿ ನಡೆಸಿ ಸಂಪೂರ್ಣ ಮಾಹಿತಿಯನ್ನು ಮಾಧ್ಯಮದವರ ಮುಂದೆ ಹಂಚಿಕೊಳ್ಳುತ್ತಿದ್ದರು. ಅತೀ ಹೆಚ್ಚು ಪತ್ರಿಕಾಗೋಷ್ಠಿಯನ್ನು ನಡೆಸಿದ ಕೀರ್ತಿ ಮಾಜಿ ಪ್ರಧಾನಿ ಮನಮೋಹನ್ ಸಿಂಗ್‌ಗೆ ಸಲ್ಲುತ್ತದೆ. ಅಲ್ಲದೇ ಡಾ. ಅಂಬೇಡ್ಕರ್ ಬಗ್ಗೆ ಅವರಿಗೆ ಅಪಾರ ಗೌರವವಿತ್ತು. ತಮ್ಮ ಸೇವೆಯನ್ನು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚು ಮೀಸಲಿಟ್ಟಿದ್ದರು. ಅವರ ನಡೆ, ರಾಜಕೀಯ ನಿಲುವು, ಮಾರ್ಗದರ್ಶನ ಪ್ರತಿಯೊಬ್ಬ ಕಾಂಗ್ರೆಸ್ ಕಾರ್ಯಕರ್ತರ ಮೇಲಿರಲಿ. ಅವರ ಅಗಲಿಕೆ ದೇಶಕ್ಕೆ ದೊಡ್ಡ ನಷ್ಟವಾಗಿದ್ದು, ಅವರ ಸ್ಥಾನವನ್ನು ಮತ್ತೊಬ್ಬ ರಾಜಕಾರಣಿ ತುಂಬಲಾರರು ಎಂದು ಕೃಷ್ಣಗೌಡ ಪಾಟೀಲ್ ಅಭಿಪ್ರಾಯಪಟ್ಟರು.

# ಚಂದನ ಸ್ಕೂಲ್‌ನಲ್ಲಿ ಡಾ.ಸಿಂಗ್‌ರಿಗೆ ಶ್ರದ್ಧಾಂಜಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸ್ಕೂಲ್ ಚಂದನದಲ್ಲಿ ಭಾರತರತ್ನ, ಮಾಜಿ ಪ್ರಧಾನಿ ಡಾ. ಮನಮೋಹನಸಿಂಗ್ ಅವರ ನಿಧನಕ್ಕೆ ಶುಕ್ರವಾರ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಸಂಸ್ಥೆಯ ನಿರ್ದೇಶಕ ಎಚ್.ಸಿ. ರಟಗೇರಿ ಮಾತನಾಡಿ, ಚಂದನ ಶಾಲೆಯ ಬಗ್ಗೆ ತಿಳಿದುಕೊಂಡಿದ್ದ ಮನಮೋಹನ್ ಸಿಂಗ್ ಅವರನ್ನು ಪ್ರೊ. ಸಿಎನ್‌ಆರ್ ರಾವ್ ವಿಜ್ಞಾನ ಕೇಂದ್ರ ಉದ್ಘಾಟನೆಗೆ ಆಹ್ವಾನಿಸಲಾಗಿತ್ತು. ಅವರು ಸಹಬರುವ ಆಸೆ ವ್ಯಕ್ತಪಡಿಸಿದದ್ದರು. ಆದರೆ ಅವರ ಆರೋಗ್ಯ ಸಮಸ್ಯೆಯ ಹಿನ್ನೆಲೆಯಲ್ಲಿ ವೈದ್ಯರು ಪ್ರವಾಸ ನಿರಾಕರಿಸಿದ್ದರಿಂದ ಅನಿವಾರ್ಯವಾಗಿ ಡಾ.ಸಿಂಗ್ ಅವರು ಸಂಸ್ಥೆಯ ಸಂಸ್ಥಾಪಕರಿಗೆ ಪತ್ರ ಬರೆದು ಶುಭಾಶಚಿು ಕೋರಿದ್ದರು.



ಜಗತ್ತು ಕಂಡ ಶ್ರೇಷ್ಠ ಆರ್ಥಿಕ ತಜ್ಞರಲ್ಲಿ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರು ಮೊದಲಿಗರಾಗಿದ್ದರು. ಭಾರತದಲ್ಲಿ ಅವರು ಪಧಾನಿಯಾಗಿದ್ದ ವೇಳೆಯಲ್ಲಿ ತಂದ ಹತ್ತು ಹಲವಾರು ಬದಲಾವಣೆಗಳಿಂದ ಭಾರತ ಮುಂಚೂಣಿಯಲ್ಲಿ ನಿಲ್ಲುವಂತಾಗಿತ್ತು. ಇಂತಹ ಶ್ರೇಷ್ಠ ವ್ಯಕ್ತಿಯನ್ನು ಕಳೆದುಕೊಂಡಿರುವದು ಭಾರತಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಹೇಳಿದರು.

ಸಂಸ್ಥೆಯ ಸಂಸ್ಥಾಪಕ ಟಿ. ಈಶ್ವರ ಸಂತಾಪ ಸೂಚಿಸಿದ್ದು, ಸ್ಕೂಲ್ ಚಂದನದಲ್ಲಿ ವಿದ್ಯಾರ್ಥಿಗಳು, ನೀರ್ದೇಶಕರು, ಪ್ರಾಂಶುಪಾಲರು ಮತ್ತು ಶಿಕ್ಷಕರು ಸೇರಿ ಶ್ರದ್ಧಾಂಜಲಿ ಅರ್ಪಿಸಿದರು.

# ರಾಮಾಯಣದಲ್ಲಿ ಹನುಮಂತನೂ ಮುಖ್ಯ ಪಾತ್ರಧಾರಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರಾಮಾಯಣದಲ್ಲಿ ರಾಮ, ಸೀತೆ, ಲಕ್ಷ್ಮಣ ಮತ್ತಿತರ ಪಾತ್ರಗಳು ಹೇಗೆ ಮುಖ್ಯವಾಗಿವೆಯೋ ಹನುಮಂತನೂ ಸಹ ಅಷ್ಟೇ ಮುಖ್ಯ ಪಾತ್ರಧಾರಿಯಾಗಿದ್ದಾನೆ. ಹನುಮಂತನಿಲ್ಲದೆ ರಾಮಾಯಣವು ಅಪೂರ್ಣ ಎನ್ನಿಸಿಕೊಳ್ಳುತ್ತದೆ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಗುರುವಾರ ನಡೆದ ಹನುಮಾನ ಚಾಲೀಸಾ ಪಠಣದ ಅಭ್ಯಾಸ ವರ್ಗದಲ್ಲಿ ಅವರು ಮಾತನಾಡಿದರು.

ರಾವಣ ಸೀತಾಮಾತೆಯನ್ನು ಕದ್ದೊಯ್ದಾಗ ಅವನು ಸೀತೆಯನ್ನು ಎಲ್ಲಿರಿಸಿದ್ದಾನೆ ಎಂಬುದನ್ನು ಹುಡುಕಲು ಸಹಾಯ ಮಾಡಿ ಯಶಸ್ವಿಯಾದವ ಹನುಮಂತ. ಸಾಗರೋಲ್ಲಂಘನ ಮಾಡುವ ಮೂಲಕ ಆತ ಲಂಕೆಗೆ ತೆರಳಿ ಅಶೋಕ ವನದಲ್ಲಿ ಸೀತಾಮಾತೆಯನ್ನು ಹುಡುಕಿದ. ಆಕೆಗೆ ರಾಮಮುದ್ರೆಯ ಉಂಗುರವನ್ನು ತೋರಿಸಿ ತನ್ನ ಪರಿಚಯ ಹೇಳಿಕೊಂಡ ಹನುಮಂತ ಲಂಕೆಯ ಜನತೆಗೆ, ಅಲ್ಲಿನ ರಾಜ ರಾವಣನಿಗೆ ತಾನೆಷ್ಟು ಕುಶಾಗ್ರಮತಿ ಎಂಬುದನ್ನು ತೋರಿಸಿದ.



ಪ್ರತಿ ವಾರವೂ ಇಲ್ಲಿ ಹನುಮಾನ ಚಾಲೀಸಾ ಪಠಣದ ಅಭ್ಯಾಸ ವರ್ಗವು ನಡೆಯುತ್ತಿದ್ದು, ಈ ಮೂಲಕ ನಮ್ಮಲ್ಲಿ ಶಕ್ತಿ, ಯುಕ್ತಿಯನ್ನು ಬೆಳೆಸಿಕೊಳ್ಳಲು ಇದನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಕುಲಕರ್ಣಿ ಹೇಳಿದರು.

ಈ ಸಂದರ್ಭದಲ್ಲಿ ಶೇಷಗಿರಿ ಕುಲಕರ್ಣಿ, ಎಸ್.ಎಚ್. ಕುಲಕರ್ಣಿ, ಅಜಿತ ಕುಲಕರ್ಣಿ, ಸುಶೀಲಾ ಪುರಾಣಿಕ, ರೂಪಾ ಗ್ರಾಮಪುರೋಹಿತ, ಲಕ್ಷ್ಮೀ ಗ್ರಾಮಪುರೋಹಿತ, ವಿದ್ಯಾ ಹೆಗಡೆ ಮುಂತಾದವರಿದ್ದರು.

# ಗ್ರಂಥಾಲಯ ನಿರ್ಮಾಣದಿಂದ ಜ್ಞಾನ ವೃದ್ಧಿ

■ವಿಜಯಸಾಕ್ಷಿ ಸುದ್ದಿ, ರೋಣ

ಗ್ರಂಥಾಲಯ ನಿರ್ಮಾಣದಿಂದ ಗ್ರಾಮದ ವಿದ್ಯಾವಂತ ಯುವ ಜನತೆಯ ಜ್ಞಾನ ವೃದ್ಧಿಯಾಗಲಿದ್ದು, ಗ್ರಂಥಾಲಯ ಕಟ್ಟಡವನ್ನು ಗ್ರಾಮಸ್ಥರು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಪುರಸಭೆ ಸದಸ್ಯ ಹಾಗೂ ಯುವ ಮುಖಂಡರಾದ ಸಂಗನಗೌಡ ಪಾಟೀಲ ಹೇಳಿದರು.

ಅವರು ಮಾರನಬಸರಿ ಗ್ರಾಮದಲ್ಲಿ 20 ಲಕ್ಷ ರೂ ವೆಚ್ಚದ ಗ್ರಂಥಾಲಯ ಕಟ್ಟಡದ ಭೂಮಿಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಗ್ರಾಮೀಣ ಭಾಗಗಳಲ್ಲಿ ಗ್ರಂಥಾಲಯದ ಅವಶ್ಯಕತೆಯಿದೆ ಎಂಬುದನ್ನು ಅರಿತು, ಗ್ರಾಮದ ವಿದ್ಯಾವಂತರ ಬೇಡಿಕೆಯೂ ಆಗಿದ್ದ ಗ್ರಂಥಾಲಯ ಕಟ್ಟಡದ ಭೂಮಿಪೂಜಾ ಕಾರ್ಯ ನಡೆಯುತ್ತಿರುವುದು ಸಂತಸ ತಂದಿದೆ. ಮುಖ್ಯವಾಗಿ ಶಾಸಕ ಜಿ.ಎಸ್. ಪಾಟೀಲರು ಗ್ರಾಮದ ಮೇಲೆ ಪ್ರೀತಿ-ವಿಶ್ವಾಸವನ್ನು ಹೊಂದಿದ್ದಾರೆ. ಈ ದಿಶೆಯಲ್ಲಿ ಗ್ರಾಮದ ಅಭಿವೃದ್ಧಿಗೆ ಶ್ರಮಿಸಲಾಗುತ್ತಿದೆ ಎಂದರು.



ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕೆ 70 ಲಕ್ಷ ರೂ ಸೇರಿದಂತೆ ಸಿದ್ದನಕೊಳ್ಳದ ಶ್ರೀಮಠದ ಅಭಿವೃದ್ಧಿಗೆ 10 ಲಕ್ಷ ರೂ, ಗ್ರಾಮ ದೇವತೆಯ ಭವನಕ್ಕೆ 3 ಲಕ್ಷ ರೂಗಳ ಅನುದಾನವನ್ನು ಒದಗಿಸಲಾಗಿದ್ದು, ಶಾಸಕರು ಶೀಘ್ರವೇ ಭೂಮಿಪೂಜಾ ಕಾರ್ಯವನ್ನು ನೆರವೇರಿಸಲಿದ್ದಾರೆ ಎಂದರು.

ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ ಭೂಮಿ ಪೂಜೆ ನೆರವೇರಿಸಿದರು. ಇದೇ ಸಂದರ್ಭದಲ್ಲಿ ಸಂಗನಗೌಡ ಪಾಟೀಲರನ್ನು ಸನ್ಮಾನಿಸಲಾಯಿತು.

ಶರಣಪ್ಪ ಕುರಿ, ಶಂಕ್ರಪ್ಪ ಸರ್ವಿ, ಸಂಗನಬಸಪ್ಪ ಹಾದಿಮನಿ, ಗ್ರಾ.ಪಂ ಉಪಾಧ್ಯಕ್ಷೆ ಮಂಜುಳಾ ಮಾದರ, ಸದಸ್ಯರಾದ ಶಿವಕುಮಾರ ದಿಂಡೂರ, ಅಲ್ಲಾಸಾಬ ಮೋತೆಖಾನ್, ದಿಲ್‌ಶ್ಯಾದಬೇಗಂ ದೋಟಿಹಾಳ, ಹನಮವ್ವ ತಳವಾರ, ಮಹ್ಮದ ಸವಡಿ, ಅಡಿವೆಪ್ಪ ಜಿಗಳೂರ, ರಿಯಾಜ್ ಆಲೂರ, ದಸ್ತಿಗೀರಸಾಬ ದೋಟಿಹಾಳ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

# ರಾಜಕಾರಣಕ್ಕೆ ಡಾ. ಸಿಂಗ್ ಸದಾ ಆದರ್ಶ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಡೀ ಜಗತ್ತೇ ಬೆರಗಾಗುವಂತೆ ಆರ್ಥಿಕ ಸುಧಾರಣೆಗಳನ್ನು ಮಾಡುತ್ತಾ, ಸರಳ ಸಜ್ಜನಿಕೆಯಿಂದ 10 ವರ್ಷಗಳ ಕಾಲ ಪ್ರಧಾನಿಯಾಗಿ ದೇಶವನ್ನು ಮುನ್ನಡೆಸಿದ ಡಾ. ಮನಮೋಹನ್ ಸಿಂಗ್ ರಾಜ-ಕಾರಣಕ್ಕೆ ಸದಾ ಆದರ್ಶವಾಗಿದ್ದಾರೆ ಎಂದು ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಹೇಳಿದರು.

ದೇಶದಲ್ಲಿ ಬಡತನ ನಿರ್ಮೂಲನೆಗಾಗಿ, ಹಸಿವಿನಿಂದ ಯಾರೂ ಬಳಲಬಾರದೆನ್ನುವ ಉದ್ದೇಶದಿಂದ ಆಹಾರ ಭದ್ರತಾ ಯೋಜನೆ ಜಾರಿ, ಪ್ರತಿಯೊಬ್ಬರಿಗೂ ಶಿಕ್ಷಣ ಸಿಗವುದಕ್ಕಾಗಿ ಸರ್ವ ಶಿಕ್ಷಣ ಅಭಿಯಾನ, ನಗರ ಪ್ರದೇಶಗಳನ್ನು ಮೇಲ್ದರ್ಜೆಗೇರಿಸುವ ಯೋಜನೆಗಳು, ಸ್ತ್ರೀ ಸಬಲೀಕರಣ, ಆಧಾರ್, ಆರ್‌ಟಿಐ ಹಾಗೂ 72 ಸಾವಿರ ಕೋಟಿ ರೂ ರೈತರ ಸಾಲ ಮನ್ನಾ ಹೀಗೆ ಹಲವು ಅಭಿವೃದ್ಧಿ ಕಾರ್ಯಗಳನ್ನು ಮಾಡಿ ಜನಮಾನಸದಲ್ಲಿ ಉಳಿದಿದ್ದಾರೆ.



33 ವರ್ಷ ರಾಜ್ಯಸಭೆ ಸದಸ್ಯರಾಗಿ, ಹಲವು ವಿ.ವಿಗಳಿಂದ ಡಾಕ್ಟರೇಟ್ ಪದವಿ, ರಿಸರ್ವ್ ಬ್ಯಾಂಕ್ ಗವರ್ನರ್ ಆಗಿ, ಪಿ.ವ್ಹಿ. ನರಸಿಂಹರಾವ್ ಅವರ ಅವಧಿಯಲ್ಲಿ ವಿತ್ತ ಸಚಿವರಾಗಿ ಸೇವೆ ಸಲ್ಲಿಸಿ ಅನೇಕರಿಗೆ ಮಾದರಿಯಾಗಿದ್ದರು. ಪ್ರಸ್ತುತ ಆರ್ಥಿಕ ಬಿಕ್ಕಟ್ಟುಗಳನ್ನು ಸರಿದೂಗಿಸುವುದಕ್ಕಾಗಿ ಅವರ ಸಲಹೆ ಸೂಚನೆಯನ್ನು ಪಡೆಯಲಾಗುತ್ತಿತ್ತು. ಇಂತಹ ಆದರ್ಶಪ್ರಾಯ ಮಾಜಿ ಪ್ರಧಾನಿ ಅವರ ಆದರ್ಶ ಪ್ರತಿಯೊಬ್ಬ ರಾಜಕಾರಣಿಗೂ ಮಾದರಿಯಾಗಿದೆ ಎಂದರು.

### 2ನೇ ದಿನಕ್ಕೆ ಕಾಲಿಟ್ಟ ಬೀದಿ ಬದಿ ವ್ಯಾಪಾರಸ್ಥರ ಅನಿರ್ಧಿಷ್ಟಾವಧಿ ಧರಣಿ

# ಸೂಕ್ತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ತಹಸೀಲ್ದಾರರ ಕಚೇರಿಯ ಮುಂಭಾಗದಲ್ಲಿ ಕರ್ನಾಟಕ ರಾಜ್ಯ ಬೀದಿ ಬದಿ ವ್ಯಾಪಾರಸ್ಥರ ಸಂಘದ (ಅಖಖಿಗ ಸಂಯೋಜಿತ) ತಾಲೂಕು ಸಮಿತಿ ನೇತೃತ್ವದಲ್ಲಿ ಹಮ್ಮಿಕೊಂಡಿರುವ ಅನಿರ್ದಿಷ್ಟಾವಧಿ ಸತ್ಯಾಗ್ರಹ 2ನೇ ದಿನಕ್ಕೆ ಕಾಲಿಟ್ಟಿದೆ.

ಈ ವೇಳೆ ಸಿಪಿಐಎಂ ಪಕ್ಷದ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ ಹೋರಾಟಕ್ಕೆ ಬೆಂಬಲ ಸೂಚಿಸಿ ಮಾತನಾಡಿ, ಗಜೇಂದ್ರಗಡ ಜಿಲ್ಲೆಯಲ್ಲಿಯೇ ವೇಗವಾಗಿ ಬೆಳೆಯುತ್ತಿರುವ ನಗರವಾಗಿದ್ದು, ಸುತ್ತಮುತ್ತಲಿನ ಜನರಿಗೆ, ವ್ಯಾಪಾರಸ್ಥರಿಗೆ ಜೀವಾಳವಾಗಿದೆ. ಆದರೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಇಲ್ಲದಾಗಿದ್ದು, ರಸ್ತೆ ಮೇಲೆ ಇರುವ ಮಾರುಕಟ್ಟೆಯನ್ನು ಏಕಾಏಕಿ ಸ್ಥಳಾಂತರ ಮಾಡಿದ್ದರಿಂದ ಎಷ್ಟೋ ಬಡ ಕುಟುಂಬಗಳು ಬೀದಿಗೆ ಬರುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.




ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಸೂಕ್ತ ಸಭೆ ನಡೆಸಿ ಸೂಕ್ತ ಪರಿಹಾರ ಕಂಡುಕೊಳ್ಳಬೇಕೆಂದು ಸಾಕಷ್ಟು ಬಾರಿ ಮನವಿ ಸಲ್ಲಿಸಿದರೂ ಅಧಿಕಾರಿಗಳು ಸ್ಪಂದಿಸುತ್ತಿಲ್ಲ ಎಂದರು.

ಸಂಘದ ಪ್ರಧಾನ ಕಾರ್ಯದರ್ಶಿ ಪೀರು ರಾಠೋಡ ಮಾತನಾಡಿ, ಮಾರುಕಟ್ಟೆ ಸ್ಥಳಾಂತರದಿಂದ ವ್ಯಾಪಾರಸ್ಥರ ಬದುಕು ಕಷ್ಟವಾಗಿದೆ. ನಮಗೆ ಒಂದು ಸೂಕ್ತ ಮಾರುಕಟ್ಟೆ ನೀಡಬೇಕು, ನಮ್ಮ ಹಕ್ಕುಗಳ ರಕ್ಷಣೆ ಆಗಬೇಕು. ನಮ್ಮ ಬೇಡಿಕೆ ಈಡೇರುವವರೆಗೂ ನಾವು ಆಹೋರಾತ್ರಿ ಧರಣಿಯನ್ನು ಮುಂದುವರೆಸುತ್ತೇವೆ ಎಂದರು.

ಇದೇ ವೇಳೆ ಬೀದಿ ಬದಿ ವ್ಯಾಪಾರಿಗಳು ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದರು.

ಕೂಲಿಕಾರರ ಸಂಘದ ತಾಲೂಕಾಧ್ಯಕ್ಷ ಬಾಲು ರಾಠೋಡ, ಬೀದಿ ಬದಿ ವ್ಯಾಪರಸ್ಥರ ಸಂಘದ ಅಧ್ಯಕ್ಷ ಶಾಮೀದಸಾಬ ದಿಂಡವಾಡ, ಮೆಹಬೂಬ್ ಹವಾಲ್ದಾರ್, ಚಂದ್ರು ರಾಠೋಡ, ಚೌಡಮ್ಮ ಯಲು, ಮೈಬೂಸಾಬ್ ಮಾಲ್ದಾರ, ಮುತ್ತಣ್ಣ ರಾಠೋಡ, ಅಂಬರೇಶ ಚವ್ಹಾಣ, ಮಾರುತಿ ಗೊಂದಳೆ, ಮುತ್ತಣ್ಣ ತೇಜಪ್ಪ ರಾಠೋಡ, ವೀಷ್ಣು ಚಂದುಕರ, ಮಹಾಂತೇಶ ಹಿರೇಮಠ, ಬಡಿಗೇರ ಪರಸುರಾಮ, ಗಂಗಾಧರ ಸತ್ಯನ್ನವರ ಮುಂತಾದವರು ಭಾಗವಹಿಸಿದ್ದರು.

ಹೋರಾಟವನ್ನು ಬೆಂಬಲಿಸಿ ಖಊಖ ರಾಜ್ಯ ಉಪಾಧ್ಯಕ್ಷ ಗಣೇಶ ರಾಠೋಡ ಮಾತನಾಡಿ, ವ್ಯಾಪಾರಸ್ಥರಿಗೆ ಸೂಕ್ತ ಮಾರುಕಟ್ಟೆ ಮತ್ತು ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕೆಲಸವನ್ನು ಸ್ಥಳೀಯ ಸಂಸ್ಥೆ ಒದಗಿಸಬೇಕು. ಈ ಬಗ್ಗೆ ಇಲ್ಲಿನ ಜನಪ್ರತಿನಿಧಿಗಳು ಗಮನಹರಿಸಬೇಕು. ಇಲ್ಲವಾದರೆ ವ್ಯಾಪಾರಸ್ಥರ ಮಕ್ಕಳು, ವಿದ್ಯಾರ್ಥಿಗಳು ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.


**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.

ಇ ಮೇಲ್: uda-gadag@hotmail.com

ಸಂ: ನಅಪ್ರಾಗಬೆ/ಭೂಬ/2024-25/1332 ದಿನಾಂಕ:26.12.2024

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ವಸಂತಕುಮಾರ ಬಾಬುಲಾಲ ಜೈನ್, ಶ್ರೀಮತಿ ರೇಖಾ ಕೋಂ ಮುಖೇಶ ಜೈನ್ ಹಾಗೂ ಶ್ರೀಮತಿ ಜಯಶ್ರೀ ಕೋಂ ಲಿಂಗನಗೌಡ ಪರ್ವತಗೌಡ್ರ** ಇವರು ಸಾ॥ ಗದಗ ಈ ಕೆಳಕಂಡ ಜಮೀನುಗಳನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ) ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 01 | ಗದಗ | 392/*/7 | 01ಎಕರೆ-19ಗುಂಟೆ -08ಆಣೆ | ಕೃಷಿ ವಲಯ | ವಸತಿ |
| 02 | ಗದಗ | 392/*/8 | 01ಎಕರೆ-19ಗುಂಟೆ -08ಆಣೆ | | |
| | | | **ಒಟ್ಟು ಕ್ಷೇತ್ರ: 02ಎ-38ಗುಂ-16ಆಣೆ** | | |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ/ಗದಗ/491/ದೇಶಪಾಂಡೆಪಬ್ಲಿಸಿಟಿ/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka